ಸಂಪುಟ : 11 ಸಂಚಿಕೆ: 05 ಪುಟ : 4+2 ಬೆಲೆ: 3.00 ಶುಕ್ರವಾರ ಜನವರಿ 30 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 05 Pages : 4+2 Price : 3.00 Friday January 30 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಸಂಸದ ಕ್ರೀಡಾ ಮಹೋತ್ಸವ-2026

■ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ ಪ್ರಸ್ತುತಪಡಿಸುವ 'ಹಾವೇರಿ ಸಂಸದ ಕ್ರೀಡಾ ಮಹೋತ್ಸವ 2025–26'ನ್ನು ಗ್ರಾಮೀಣ ಪ್ರದೇಶದ ಯುವಜನತೆಯನ್ನು ಕ್ರೀಡೆಗಳಲ್ಲಿ ಆಸಕ್ತಿ ಮೂಡಿಸಲು ಹಾಗೂ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಸಲುವಾಗಿ ಹಾಗೂ ಪ್ರತಿ ಸಂಸದರು ತಮ್ಮ ಲೋಕಸಭಾ ವ್ಯಾಪ್ತಿಯಲ್ಲಿನ ಮಕ್ಕಳಿಗೆ ಮತ್ತು ಯುವಜನತೆಗೆ ಕ್ರೀಡೆಗಳಲ್ಲಿ ಪ್ರೋತ್ಸಾಹ ನೀಡಬೇಕೆಂಬ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಲೋಕಸಭಾ ವ್ಯಾಪ್ತಿಯಲ್ಲಿ ಸಂಸದ ಕ್ರೀಡಾ ಮಹೋತ್ಸವವನ್ನು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಘಟಿಸಲು ಸೂಚಿಸಲಾಗಿದೆ.

ಸಂಸದ ಕ್ರೀಡಾ ಮಹೋತ್ಸವವನ್ನು ತಾಲೂಕು ಮಟ್ಟದಲ್ಲಿ ಗದಗ ಜಿಲ್ಲೆಯ 7 ತಾಲೂಕುಗಳಲ್ಲಿ ಆಯೋಜಿಸಲಾಗುತ್ತಿದ್ದು, ಗದಗ ತಾಲೂಕಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ರೋಣ ತಾಲೂಕಿನಲ್ಲಿ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣ, ಶಿರಹಟ್ಟಿ ತಾಲೂಕಿನಲ್ಲಿ ಎಫ್.ಎಂ. ಡಬಾಲಿ ತಾಲೂಕು ಕ್ರೀಡಾಂಗಣ, ಮುಂಡರಗಿ ತಾಲೂಕಿನಲ್ಲಿ ಅನ್ನದಾನೀಶ್ವರ ತಾಲೂಕು ಕ್ರೀಡಾಂಗಣ, ನರಗುಂದ ತಾಲೂಕಿನಲ್ಲಿ ತಾಲೂಕು ಕ್ರೀಡಾಂಗಣ, ಲಕ್ಷ್ಮೇಶ್ವರ ತಾಲೂಕಿನಲ್ಲಿ ಉಮಾ ಮಹಾವಿದ್ಯಾಲಯದ ಮೈದಾನ ಮತ್ತು ಗಜೇಂದ್ರಗಡ ತಾಲೂಕಿನಲ್ಲಿ ಎಸ್.ಎಂ. ಭೂಮರೆಡ್ಡಿ ಶಿಕ್ಷಣ ಸಂಸ್ಥೆಯ ಮೈದಾನದಲ್ಲಿ ತಾಲೂಕು ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ.

ಕ್ರೀಡಾಕೂಟದಲ್ಲಿ ಅಥ್ಲೆಟಿಕ್ಸ್ ಆಟಗಳಾದ 100 ಮೀಟರ್ ಓಟ, 400 ಮೀಟರ್ ಓಟ, ಗುಂಡು ಎಸೆತ, ಉದ್ದ ಜಿಗಿತ, 4*100 ಮೀಟರ್ ರಿಲೇ ವಯುಕ್ತಿಕ ಕ್ರೀಡೆಗಳನ್ನು ಹಾಗೂ ಗುಂಪು ಆಟಗಳಾದ ವಾಲಿಬಾಲ್, ಖೋ–ಖೋ, ಕಬಡ್ಡಿ, ಮಲ್ಲಕಂಬ (ಜಿಲ್ಲಾ ಮಟ್ಟದಲ್ಲಿ ಮಾತ್ರ) ಆಟಗಳನ್ನು 17ರಿಂದ 25 ವಯೋಮಿತಿಯ ಬಾಲಕ/ಬಾಲಕಿಯರಿಗೆ ಪ್ರತ್ಯೇಕವಾಗಿ ಆಯೋಜಿಸಲಾಗಿರುತ್ತದೆ. ಸಂಸದ ಕ್ರೀಡಾ ಮಹೋತ್ಸವದಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಕಡ್ಡಾಯವಾಗಿ bommai.basavaraj@sansad.nic.inJsmDVhcQvJ https://sansadkhelmahotsav.in/ ಲಿಂಕ್ ಮುಖಾಂತರ ಅಥವಾ ಕಿಖ ಕೋಡ್ ಬಳಸಿ ಫೆಬ್ರವರಿ 10ರೊಳಗಾಗಿ ಹೆಸರನ್ನು ನೋಂದಾಯಿಸಿ ಭಾಗಹಿಸುವುದು ಕಡ್ಡಾಯವಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2027–28ನೇ ಸಾಲಿನ ಯೋಜನೆಯ ಚಿಂತನ–ಮಂಥನ ಸಭೆಯಲ್ಲಿ ಡಿ.ಆರ್. ಪಾಟೀಲ ಕರೆ

# ಮೊದಲು ನಮ್ಮ ಮನಸ್ಥಿತಿ ಬದಲಾಗಬೇಕು

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಸಮಾಜದಲ್ಲಿನ ಬೇರೆ ಬೇರೆ ವರ್ಗಗಳು ಅನ್ಯೋನ್ಯತೆಯಿಂದ ಬೆಳೆಯಬೇಕಾದರೆ ಸಮಾಜದ ಎಲ್ಲ ವರ್ಗಗಳಿಗೂ ಸಮಾನ ಅವಕಾಶ ಸಿಗಬೇಕು. ಜನಸಾಮಾನ್ಯರ ಬೇಡಿಕೆಯಂತೆ ರಾಜ್ಯ ಸರ್ಕಾರದ ಆಯವ್ಯಯ ರೂಪಿತಗೊಳ್ಳಬೇಕು. ಸ್ಥಳೀಯವಾಗಿ ಇರುವ ಸಮಸ್ಯೆಗಳ ಬಗ್ಗೆ ಕಾನೂನಾತ್ಮಕವಾಗಿ ಹೇಗೆ ಬಗೆಹರಿಸಿಕೊಳ್ಳಬೇಕು ಎನ್ನುವ ಕುರಿತು ಅಧಿಕಾರಿ ವರ್ಗದವರು ಶ್ರೀಸಾಮಾನ್ಯರಿಗೆ ತಿಳಿಸಬೇಕು ಎಂದು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ ಹೇಳಿದರು.

ಅವರು ಗುರುವಾರ ಶಿರಹಟ್ಟಿಯ ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ನಡೆದ ಗ್ರಾ.ಪಂ, ಪ.ಪಂ ಅಧ್ಯಕ್ಷ, ಉಪಾಧ್ಯಕ್ಷ ಸದಸ್ಯರ ಮತ್ತು ತಾಲೂಕು ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳ, ಗ್ರಾ.ಪಂ ಪಿಡಿಓಗಳ ಸಭೆ, ಜನರ ಪಾಲ್ಗೊಳ್ಳುವಿಕೆಯಿಂದ 2027–28ನೇ ಸಾಲಿನ ಯೋಜನೆಯನ್ನು ಅರ್ಥಪೂರ್ಣವಾಗಿ ಜನಪರ ಯೋಜನೆಯನ್ನಾಗಿ ಮಾಡುವ ಕುರಿತು ಕರೆದ ಚಿಂತನ–ಮಂಥನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸ್ಥಳೀಯವಾಗಿ ಇರುವ ಅಗತ್ಯ ಹಾಗೂ ಮೂಲ ಸೌಲಭ್ಯಗಳ ಬಗ್ಗೆ ರಾಜ್ಯಕ್ಕೆ ಮಾದರಿ ಆಗುವ ಹಾಗೆ ಯೋಜನೆ ರೂಪಿಸಿ ನಮ್ಮ ಗಮನಕ್ಕೆ ತಂದಲ್ಲಿ ಈ ಬಾರಿಯ ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಅಳವಡಿಕೆಗೆ ಸರ್ಕಾರದ ಗಮನ ಸೆಳೆಯಲಾಗುವುದು. ಸ್ಥಳೀಯ ಜನರ ಸಮಸ್ಯೆಗಳ ಪರಿಹಾರಕ್ಕೆ ಎಲ್ಲರೂ ಒಗ್ಗೂಡಿ ಶಾಶ್ವತ ಯೋಜನೆ ಹಮ್ಮಿಕೊಂಡಲ್ಲಿ ಇದರ ಪ್ರಯೋಜನೆ ಜನರಿಗೆ ಸಿಗಲಿದೆ. ಇಂದಿನ ಸಭೆಯ ಉದ್ದೇಶವೂ ಇದೇ ಆಗಿದೆ. ಸಾಮಾಜಿಕ ಕಳಕಳಿ ಇದ್ದು, ಸಮಾಜಕ್ಕೆ ಕೈಲಾದ ಅಳಿಲು ಸೇವೆ ಮಾಡಿದರೆ ಮಾತ್ರ ಮಹಾತ್ಮ ಗಾಂಧೀಜಿ ಅವರ ಕನಸು ನನಸಾಗಲು ಸಾಧ್ಯವಾಗುತ್ತದೆ. ಗಾಂಧೀಜಿಯವರು ದೇಶದ ಒಳಿತಿಗಾಗಿ ಸಾಕಷ್ಟು ಕನಸು ಕಂಡಿದ್ದರು. ಇದು ಇವತ್ತಿಗೂ ಸಾಕಾರಗೊಂಡಿಲ್ಲ. ಗ್ರಾಮ ಮಟ್ಟದಲ್ಲಿ ಪರಸ್ಪರ ಸಮನ್ವಯದಿಂದ ಕೆಲಸ ಮಾಡಿದಾಗ ಮಾತ್ರ ಇದು ಈಡೇರಲು ಸಾಧ್ಯ ಎಂದರು.

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಸುಜಾತ ದೊಡ್ಡಮನಿ, ಪ.ಪಂ ಮಾಜಿ ಅಧ್ಯಕ್ಷ ಹುಮಾಯೂನ ಮಾಗಡಿ ಮಾತನಾಡಿದರು.

ತಾ.ಪಂ ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ, ತಹಸೀಲ್ದಾರ ಕೆ. ರಾಘವೇಂದ್ರ ರಾವು, ತಾ.ಪಂ ಇಓ ಆರ್.ವಿ. ದೊಡ್ಡಮನಿ, ಪಿಎಸ್‌ಐ ಈರಪ್ಪ ರಿತ್ತಿ, ಬೆಳ್ಳಟ್ಟಿ ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ, ವೀರಯ್ಯ ಮಠಪತಿ, ಶಿವನಗೌಡ ಪಾಟೀಲ, ಪರಮೇಶ ಪರಬ, ಚನ್ನಪ್ಪ ಜಗಲಿ, ಡಿ.ಕೆ. ಹೊನ್ನಪ್ಪನವರ, ದೇವಪ್ಪ ಲಮಾಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸ್ಥಳೀಯವಾಗಿ ಮೀಸಲಾತಿ ಆಧಾರದ ಮೇಲೆ ಇಲ್ಲಿಯವರೆಗೂ ಅಧಿಕಾರಕ್ಕೆ ಬಂದ ಜನಪ್ರತಿನಿಧಿಗಳಿಗೆ ಅಧಿಕಾರಿಗಳು ಗ್ರಾಮ ಸಭೆ, ಗ್ರಾಮ ಪಂಚಾಯಿತಿಗಳಿಗೆ ಇರುವ ಅಧಿಕಾರದ ಕುರಿತು ಸಮಗ್ರವಾಗಿ ತಿಳಿಸಿಲ್ಲ. ಇನ್ನು ಮುಂದೆ ಈ ಕೆಲಸ ಆಗಬೇಕು. ಸಾಮಾನ್ಯ ಜನರ ಅಪೇಕ್ಷೆ–ಅನಿಸಿಕೆಯಂತೆ ಸ್ಥಳೀಯ ಮಟ್ಟದ ಸಮಸ್ಯೆಗಳು ಈ ಬಾರಿಯ ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಅಳವಡಿಕೆಯಾಗುವ ಹಂತದಲ್ಲಿ ಗಮನ ಸೆಳೆಯಲು ಎಲ್ಲರೂ ಸಹಕರಿಸಬೇಕು. ಗ್ರಾಮ ಸಭೆಗಳು ಸ್ಥಳೀಯ ಸರ್ಕಾರವಾಗಿ, ಅರ್ಥಪೂರ್ಣವಾಗಿ ಹಾಗೂ ಪರಿಣಾಮಕಾರಿಯಾಗಿ ನಡೆಯಬೇಕು, ಜನರು ಪೂರ್ಣಪ್ರಮಾಣದಲ್ಲಿ ಪಾಲ್ಗೊಳ್ಳಬೇಕು ಎಂದು ಡಿ.ಆರ್. ಪಾಟೀಲ ಹೇಳಿದರು.

## ಜಾತಿ ತಾರತಮ್ಯ ತಡೆಗಟ್ಟುವ ಯುಜಿಸಿಯ ಹೊಸ ನಿಯಮಕ್ಕೆ ಸುಪ್ರೀಂ ಕೋರ್ಟ್ ತಡೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಜಾತಿ ಆಧಾರಿತ ತಾರತಮ್ಯವನ್ನು ತಡೆಗಟ್ಟಲು ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಶ್ವವಿದ್ಯಾಲಯ ಅನುದಾನ ಆಯೋಗದ (ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಸಮಾನತೆಯ ಪ್ರಚಾರ) ನಿಯಮಗಳು, 2026ಕ್ಕೆ ಸುಪ್ರೀಂ ಕೋರ್ಟ್ ಗುರುವಾರ ಮಧ್ಯಂತರ (ಜ.29) ತಡೆ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠವು ಹೊಸ ನಿಯಮಗಳನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಸಂಬಂಧ ಕೇಂದ್ರ ಸರ್ಕಾರ ಮತ್ತು ಯುಜಿಸಿಗೆ ಮಾರ್ಚ್ 19ರಂದು ಹಿಂದಿರುಗಿಸಬಹುದಾದ ನೋಟಿಸ್ ಜಾರಿ ಮಾಡಿದೆ. ಜಾತಿ ತಾರತಮ್ಯದ ದೂರುಗಳನ್ನು ಪರಿಶೀಲಿಸಲು ಮತ್ತು ಸಮಾನತೆಯನ್ನು ಉತ್ತೇಜಿಸಲು ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳು ಸಮಾನತೆಯ ಸಮಿತಿ (Equity Committees) ರಚಿಸುವುದನ್ನು ಕಡ್ಡಾಯಗೊಳಿಸುವ ಹೊಸ ನಿಯಮಗಳನ್ನು 2026ರ ಜನವರಿ 13ರಂದು ಜಾರಿಗೆ ಬಂದಿವೆ. ಇದು 2012ರ ನಿಯಮಗಳನ್ನು ಬದಲಾಯಿಸುತ್ತವೆ, ಅದು ಹೆಚ್ಚಾಗಿ ಸಲಹಾ ಸ್ವರೂಪದ್ದಾಗಿತ್ತು.

ಸಮಾನತೆಯ ಸಮಿತಿಗಳಲ್ಲಿ ಇತರ ಹಿಂದುಳಿದ ವರ್ಗಗಳು (ಒಬಿಸಿ), ಪರಿಶಿಷ್ಟ ಜಾತಿಗಳು (ಎಸ್‌ಸಿ), ಪರಿಶಿಷ್ಟ ಪಂಗಡಗಳು (ಎಸ್‌ಟಿ), ಅಂಗವಿಕಲ ವ್ಯಕ್ತಿಗಳು ಮತ್ತು ಮಹಿಳೆಯರು ಇರಬೇಕು ಎಂದು ಹೊಸ ನಿಯಮಗಳು ಹೇಳುತ್ತದೆ.

ಅರೆ ಕಾನೂನು ಸ್ವಯಂ ಸೇವಕರಿಗೆ ಎರಡು ದಿನಗಳ ತರಬೇತಿ ಕಾರ್ಯಾಗಾರ

# ಪ್ರತಿಯೊಬ್ಬರಿಗೂ ಕಾನೂನು ಅರಿವು ಮುಖ್ಯ

■ವಿಜಯಸಾಕ್ಷಿ ಸುದ್ದಿ, ಗದಗ




ಜಿಲ್ಲೆಯಾದ್ಯಂತ 240ಕ್ಕೂ ಹೆಚ್ಚು ಅರೆ ಕಾನೂನು ಸ್ವಯಂ ಸೇವಕರು ನೇಮಕಗೊಂಡಿದ್ದಾರೆ. ಪ್ರತಿಯೊಬ್ಬರಿಗೂ ಕಾನೂನು ಅರಿವು ಮುಖ್ಯವಾಗಿದೆ. ಸಮಾಜಕ್ಕಾಗಿ ದುಡಿಯಲು, ಮನೆ–ಮನೆಗೆ ತೆರಳಿ ಸಾರ್ವಜನಿಕರ ಸಮಸ್ಯೆ ಆಲಿಸಲು ಸ್ವಯಂ ಸೇವಕರು ಸಿದ್ಧರಿದ್ದಾರೆ. ಅವರು ಕಾನೂನು ಚೌಕಟ್ಟಿನಲ್ಲಿ ಸಮಸ್ಯೆಗಳನ್ನು ಆಲಿಸಬೇಕು. ಇದರಿಂದ ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಸಾಧ್ಯವಾಗುತ್ತದೆ. ಶಾಲೆ ಬಿಟ್ಟ ಮಕ್ಕಳನ್ನು ಸಹ ಈ ಮೂಲಕ ಮರಳಿ ಶಾಲೆಗೆ ಸೇರಿಸಬಹುದು. ಗದಗ ಜಿಲ್ಲೆಯನ್ನು ಸಮಸ್ಯೆ ಮುಕ್ತ ಮಾಡಲು ಶ್ರಮಿಸೋಣ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನಾಗವೇಣಿ ಹೇಳಿದರು.

ಜಿಲ್ಲಾ ನ್ಯಾಯಾಲಯದ ಆವರಣದಲ್ಲಿನ ಎ.ಡಿ.ಆರ್ ಕಟ್ಟಡದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಗದಗ, ಜಿಲ್ಲಾ ವಕೀಲರ ಸಂಘ ಹಾಗೂ ಡೀಡ್ಸ್ ಮಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅರೆ ಕಾನೂನು ಸ್ವಯಂ ಸೇವಕರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಎಮ್.ಎ. ಸಂಕನಾಳ ಮಾತನಾಡಿ, ಕಾನೂನು ತಿಳುವಳಿಕೆ ಪ್ರತಿಯೊಬ್ಬ ನಾಗರಿಕನ ಮುಖ್ಯ ಉದ್ದೇಶವಾಗಿದೆ. ಆತ್ಮರಕ್ಷಣೆಗಾಗಿ ಕಾನೂನಿನ ಅವಶ್ಯಕತೆ ಇದೆ. ಕಾನೂನು ಕಾರ್ಯಾಗಾರಗಳಿಂದ ಉತ್ತಮ ಸಮಾಜ ನಿರ್ಮಿಸಲು ಸಹಾಯವಾಗುತ್ತದೆ ಎಂದರು.

ಮಹಿಳಾ ಸ್ವಯಂ ಸೇವಕರಾದ ರೂಪಾ ಹಾಗೂ ನಿರ್ಮಲಾ ಪ್ರಾರ್ಥನಾ ಗೀತೆ ಹಾಡಿದರು. ಎ.ಎಸ್. ಮಕಾನಾದಾರ ಸ್ವಾಗತಿಸಿದರು. ಫಕ್ಕೀರಮ್ಮ ಲಕ್ಕುಂಡಿ ಕಾರ್ಯಕ್ರಮ ನಿರೂಪಿಸಿದರು.

ಈ ಸಂದರ್ಭದಲ್ಲಿ ಹಿರಿಯ ವಕೀಲರಾದ ಜಿ.ಸಿ. ರೇಷ್ಮಿ, ಡೀಡ್ಸ್ ಯೋಜನಾ ಸಂಯೋಜಕರಾದ ತುಕಾರಾಮ್ ಎಕ್ಕಾರು, ಮುಖ್ಯ ಕಾನೂನು ನೆರವು ಅಭಿರಕ್ಷಕರಾದ ಎಸ್.ವ್ಹಿ. ಗ್ರಾಮಪುರೋಹಿತ ಹಾಗೂ ಸಹಾಯಕ ಕಾನೂನು ನೆರವು ಅಭಿರಕ್ಷಕ ಗುರುರಾಜ ಬಿ.ಗೌರಿ ಉಪಸ್ಥಿತರಿದ್ದರು.

ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ನ್ಯಾಯ ದೊರಕಬೇಕು ಎನ್ನುವುದೇ ಈ ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ. ಸಮಾಜದ ಎಲ್ಲ ವಿಭಾಗಗಳಿಂದ ಸ್ವಯಂ ಸೇವಕರನ್ನು ಆಯ್ಕೆ ಮಾಡಿಕೊಳ್ಳಲಾಗಿದೆ. ಇದರಿಂದ ಉತ್ತಮ ಸಮಾಜ ನಿರ್ಮಿಸುವಲ್ಲಿ ಸಹಾಯವಾಗುತ್ತದೆ.

–ಜಿ.ಆರ್. ಶೆಟ್ಟರ್.
ಸಿ.ಜೆ.ಎಮ್ ಹಾಗೂ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು.

## ವಾಣಿಜ್ಯ ತೆರಿಗೆ ಇಲಾಖೆಯ ಜಂಟಿ ಆಯುಕ್ತರ ಭೇಟಿ



■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ವಾಣಿಜ್ಯ ತೆರಿಗೆ ಇಲಾಖೆಯ (ಆಡಳಿತ) ಜಂಟಿ ಆಯುಕ್ತರಾದ ಸುಕನ್ಯಾ ಜಿ.ನಾಯಕ ಇವರನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ ಹಾಗೂ ಸಂಸ್ಥೆಯ ತೆರಿಗೆ ಸಲಹಾ ಸಮಿತಿ ಚೇರಮನ್ ವಿಜಯಕುಮಾರ ಎಸ್.ಮಾಟಲದಿನ್ನಿ ಇವರ ನಿಯೋಗದೊಂದಿಗೆ ಭೇಟಿಯಾದರು.

ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಜಯದೇವ ಎಂ.ಮೆಣಸಗಿ, ಸಿದ್ರಾಮಪ್ಪ ಎ.ಉಮಚಗಿ, ಸಹ ಗೌರವ ಕಾರ್ಯದರ್ಶಿ ಅಶೋಕ ಎಸ್.ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಎಸ್.ಕಾಮತ, ಮಾಜಿ ಅಧ್ಯಕ್ಷ ಮದುಸೂಧನ ಡಿ.ಪುಣೇಕರ, ಮಲ್ಲಿಕಾರ್ಜುನ ಬಿ.ಸುರಕೋಡ ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

91ನೇ ದಿನದ ಪರಿಸರ ಉಳಿಸಿ ಧರಣಿಗೆ ಎನ್‌ಕೆಪಿಎಂ ವಿದ್ಯಾರ್ಥಿಗಳ ಸಾಥ್

# ಮುಂದಿನ ಪೀಳಿಗೆಯ ಉಳಿವಿಗಾಗಿ ಹೋರಾಟ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ




ನಗರಸಭೆಯ ಎದುರು ಜಿಲ್ಲಾ ಬಚಾವೋ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆಯ ಜಂಟಿ ಕ್ರಿಯಾ ವೇದಿಕೆ ಮೂಲಕ ಕಳೆದ 91 ದಿನಗಳಿಂದ ನಡೆಯುತ್ತಿರುವ 'ಕಾರ್ಖಾನೆ ತೊಲಗಿಸಿ, ಜೀವ ಉಳಿಸಿ–ಧರಣಿಗೆ ಎನ್.ಕೆ.ಪಿ.ಎಂ ಶಾಲೆಯ ವಿದ್ಯಾರ್ಥಿಗಳು ಬೆಂಬಲಿಸಿದರು.

ಈ ವೇಳೆ ಶಿಕ್ಷಕಿ ರಂಗಮ್ಮ ಕೆ ಮಾತನಾಡಿ, ಅಭಿವೃದ್ಧಿಯ ಹೆಸರಿನಲ್ಲಿ ಸ್ಥಾಪಿಸಿದ ಕೈಗಾರಿಕೆಗಳು ನಮ್ಮ ಜೀವಕ್ಕೆ ಬಾಧೆಯನ್ನುಂಟು ಮಾಡುತ್ತಿವೆ. ನಮಗೆ ಮೊದಲು ಜೀವ ಮತ್ತು ಆರೋಗ್ಯ ಉಳಿಯಬೇಕು. ಆನಂತರವಷ್ಟೇ ಅಭಿವೃದ್ಧಿ, ಉದ್ಯೋಗ ಕುರಿತು ಮಾತನಾಡೋಣ. ಈಗ ಕೊಪ್ಪಳಕ್ಕೆ ಸಂಕಷ್ಟ ತಂದಿರುವುದು ಪರಿಸರ ಮಾಲಿನ್ಯ. 20 ಹಳ್ಳಿಗಳು ಗಂಭೀರ ರೋಗರುಜಿನಗಳಿಂದ ಬಾಧಿತವಾಗಿವೆ. ಇದು ಗೊತ್ತಿದ್ದೂ ನಗರದ ಪಕ್ಕದಲ್ಲಿ ಬಹುದೊಡ್ಡ ಹೂಡಿಕೆ ಮಾಡಿ ಮಾಲಿನ್ಯಕಾರಕ ಬಲ್ಡೋಟ ಕಾರ್ಖಾನೆ ಸ್ಥಾಪಿಸುವುದು ಎಷ್ಟು ಸರಿ? ಮುಂದಿನ ಮಕ್ಕಳ ಭವಿಷ್ಯವಂತೂ ಇದರಿಂದ ಕತ್ತಲಾಗುತ್ತದೆ. ಆದ್ದರಿಂದ ನಾವೆಲ್ಲ ಹೋರಾಡಿ ಎಷ್ಟೇ ಕಷ್ಟವಾದರೂ ಇದನ್ನು ನಿಲ್ಲಿಸೋಣ. ಇಲ್ಲದಿದ್ದರೆ ಊರು ಬಿಟ್ಟು ಹೋಗಬೇಕಾಗುತ್ತದೆ ಎಂದರು.

ವಿದ್ಯಾರ್ಥಿಗಳಾದ ಕೃಷ್ಣ, ಮಧು, ಜೋಯಾ ಮಾತನಾಡಿ, ನಾವೆಲ್ಲರೂ ವಿದ್ಯಾರ್ಥಿಗಳು ಬೀದಿಗಿಳಿದು ಹೋರಾಡುವ ಅನಿವಾರ್ಯತೆ ಬಂದಿದೆ. ಇಲ್ಲಿನ ಹಿರಿಯರು ನಮ್ಮ ಭವಿಷ್ಯದ ಬಗ್ಗೆ ಕಾಳಜಿಯನ್ನು ಇಟ್ಟುಕೊಂಡು ಹೋರಾಟ ಮಾಡುತ್ತಿದ್ದಾರೆ. ಇವರಿಗೆ ನಾವು ವಿಧೇಯರಾಗಿರೋಣ ಎಂದರು.

ಪರಿಸರ ಜಾಗೃತಿ ಗೀತೆಯನ್ನು ವಿದ್ಯಾರ್ಥಿಗಳಾದ ಮಿಶ್ಬಾ, ಅರ್ಪಿತಾ, ಮಧು, ಕೃಷ್ಣ ಮತ್ತು ಶ್ವೇತಾ ಹಾಡಿದರು. ಧರಣಿ ಸತ್ಯಾಗ್ರಹದ ನೇತೃತ್ವ ವಹಿಸಿದ್ದ ಪ್ರಧಾನ ಸಂಚಾಲಕರಾದ ಅಲ್ಲಮಪ್ರಭು ಬೆಟ್ಟದೂರು, ಸಾಹಿತಿ ಎ.ಎಂ. ಮದರಿ, ಸಂಚಾಲಕರಾದ ಮಲ್ಲಿಕಾರ್ಜುನ ಬಿ.ಗೋನಾಳ, ಮಂಜುನಾಥ ಜಿ.ಗೊಂಡಬಾಳ, ನಿವೃತ್ತ ಪ್ರಾಚಾರ್ಯ ಎಸ್.ಬಿ. ರಾಜೂರು, ನಿವೃತ್ತ ಉಪನ್ಯಾಸಕ ಶಂಭುಲಿಂಗಪ್ಪ ಹರಗೇರಿ, ನಿವೃತ್ತ ಕಾರ್ಮಿಕ ನಿರೀಕ್ಷಕ ಶಾಂತಯ್ಯ ಅಂಗಡಿ, ಮಹದೇವಪ್ಪ ಮಾವಿನಮಡು, ವಿಜಯ ಮಹಾಂತೇಶ್ ಹಟ್ಟಿ, ನಿವೃತ್ತ ಪ್ರಾಚಾರ್ಯ ಬಿ.ಜಿ. ಕರಿಗಾರ, ಡಿ.ಎಂ. ಬಡಿಗೇರ, ಚಾರಣ ಬಳಗದ ಸಿ.ಬಿ. ಪಾಟೀಲ್, ಮಂಜುನಾಥ ಕವಲೂರು, ಗವಿಸಿದ್ದಪ್ಪ ತುಮ್ಮರಗುದ್ದಿ, ಪಂಪಣ್ಣ ಚಿಂತಪಲ್ಲಿ, ರತ್ನಮ್ಮ ಪುರಾಣಿಕಮಠ, ಪದ್ಮಾವತಿ ದಸ್ತೇನವರ್, ರಮೇಶ ಪಿ.ಬಿ, ಶಿವಪ್ಪ ಜಲ್ಲಿ, ಮಖ್ಬುಲ್ ರಾಯಚೂರು, ಯಮನೂರಪ್ಪ ಹಳ್ಳಿಕೇರಿ, ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಶಿಕ್ಷಕ ಬಿ.ಎಂ. ನಿತಿನ್ ಮಾತಾಡಿ, ಕೊಪ್ಪಳ ಅತ್ಯಂತ ಶುಷ್ಕ ಹವಾಮಾನ ಇರುವ ನಗರ. ಈಗ ಧೂಳುಮಯವಾಗಿದೆ. ಮಕ್ಕಳಾದಿಯಾಗಿ ಪರಿಸರದ ಹಕ್ಕು ಕೇಳುವುದು ಇಲ್ಲಿನ ಅನಿವಾರ್ಯತೆಯಾಗಿದೆ ಎಂದು ಹೇಳಿದರು.

## ಶೈಕ್ಷಣಿಕ ಶುಲ್ಕ ಮರುಪಾವತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಎನ್. ಐ. ಎಸ್ (Six Week Certificate Course, P.G. Diploma and M.Sc Sports Coaching ) ತರಬೇತಿ ಪಡೆಯುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಶುಲ್ಕವನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಫೆಬ್ರವರಿ 2 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಕ್ರೀಡಾಪಟುಗಳು ಪರಿಶಿಷ್ಟ ಜಾತಿಗೆ ಸೇರಿದ್ದು, ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಶೈಕ್ಷಣಿಕ ಶುಲ್ಕ ಮರುಪಾವತಿಯನ್ನು ಕರ್ನಾಟಕ ನಿವಾಸಿಗಳಿಗೆ ಮಾತ್ರ ನೀಡಲಾಗುವುದು. ಶೈಕ್ಷಣಿಕ ಶುಲ್ಕ ಮರುಪಾವತಿಯನ್ನು ಭಾರತೀಯ ಕ್ರೀಡಾ ಪ್ರಾಧಿಕಾರದಿಂದ ನಡೆಸುವ (Six Week Certificate Course, P.G. Diploma and M.Sc Sports Coaching ) ತರಬೇತಿಗಳಿಗೆ ಮಾತ್ರ ನೀಡಲಾಗುವುದು. ಅಭ್ಯರ್ಥಿಗಳು ಭಾರತೀಯ ಕ್ರೀಡಾ ಪ್ರಾಧಿಕಾರಕ್ಕೆ ಪಾವತಿಸಲಾಗುವ ಶುಲ್ಕದ ಸಂಪೂರ್ಣ ಮೊತ್ತವನ್ನು ಮಾತ್ರ ಮರುಪಾವತಿ ಮಾಡಲಾಗುವುದು. ಸರ್ಕಾರ/ಅರೆ ಸರ್ಕಾರಿ ಇಲಾಖೆಗಳಲ್ಲಿ ನೇಮಕಗೊಂಡು ಸೇವೆ ಸಲ್ಲಿಸುತ್ತಿರುವವರು ಈ ಯೋಜನೆಗೆ ಅರ್ಹರಿರುವುದಿಲ್ಲ. ವಿದ್ಯಾರ್ಥಿಗಳು ಆಧಾರ್ ಕಾರ್ಡ್, ಪಡಿತರ ಚೀಟಿ ಹಾಗೂ ಆರ್. ಡಿ. ಸಂಖ್ಯೆಯನ್ನು ಒಳಗೊಂಡ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು. ಬ್ಯಾಂಕ್ ಖಾತೆ ಕಡ್ಡಾಯವಾಗಿ ಕ್ರೀಡಾಪಟುವಿನ ಹೆಸರಿನಲ್ಲಿರಬೇಕು. ಬ್ಯಾಂಕ್ ಪಾಸ್ ಪುಸ್ತಕದ ಮುಖಪುಟವನ್ನು ಲಗತ್ತಿಸಬೇಕು (ಹೆಸರು, ಖಾತೆ ಸಂಖ್ಯೆ IFSC ಸಂಖ್ಯೆ ಇರುವ ಸಂಪೂರ್ಣ ವಿವರಗಳನ್ನೊಳಗೊಂಡ ಪ್ರತಿ). ಪ್ರಸಕ್ತ ಸಾಲಿನಲ್ಲಿ ಪ್ರವೇಶಾತಿ ಹೊಂದಿ ತರಬೇತಿಯನ್ನು ಪಡೆಯುವ ಅಭ್ಯರ್ಥಿಗಳಿಗೆ ಮಾತ್ರ ಶೈಕ್ಷಣಿಕ ಶುಲ್ಕ ಮರುಪಾವತಿಯನ್ನು ನೀಡಲಾಗುವುದು.

ಅರ್ಜಿಗಳು ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಕಚೇರಿಯಲ್ಲಿ ಲಭ್ಯವಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ದೂರವಾಣಿ ಸಂಖ್ಯೆ 08372-238445 ಗೆ ಸಂಪರ್ಕಿಸಲು ಪ್ರಕಟಣೆಗೆ ತಿಳಿಸಿದ್ದಾರೆ.

ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಿದವರ ಗಮನಕ್ಕೆ 2020-21, 2021-22, 2022-23, 2023-24, 2024-25 ಮತ್ತು 2025-26 ನೇ ಸಾಲಿನ ಮೆಟ್ರಿಕ್ ನಂತರದ ಶುಲ್ಕ ಮರುಪಾವತಿ ಕಾರ್ಯಕ್ರಮದಡಿ ಅರ್ಜಿ ಸಲ್ಲಿಸಿ ಸೂಕ್ತ ದತ್ತಾಂಶ ಲಭ್ಯವಿಲ್ಲದೆ ಪಾವತಿ ಮಾಡಲು ಬಾಕಿ ಇರುವ ವಿದ್ಯಾರ್ಥಿಗಳಿಗೆ ತಮ್ಮ ಆದಾರ್, Councellingf details ಹಾಗೂ ಹಿಂದಿನ ವರ್ಷದ ಶೈಕ್ಷಣಿಕ ವರ್ಷದ ಫಲಿತಾಂಶದ ದತ್ತಾಂಶವನ್ನು Update ಮಾಡಿಕೊಳ್ಳಲು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ವಿದ್ಯಾರ್ಥಿಗಳ ಲಾಗಿನ್, ಜಿಲ್ಲಾ/ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಲಾಗಿನ್ ನಲ್ಲಿ ಅವಕಾಶ ನೀಡಲಾಗಿದೆ. 30-01-2026 ರೊಳಗಾಗಿ ಅಪ್ಡೇಟ್ ಮಾಡಿಕೊಳ್ಳಲು ವಿದ್ಯಾರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

**ಜ. 30ರಿಂದ ಫೆ. 1ರವರೆಗೆ ನಡೆಯುವ ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳ ಜಾತ್ರಾ ಮಹೋತ್ಸವದ ಅಂಗವಾಗಿ ವಿಶೇಷ ಲೇಖನ**

# ಮಹಿಮಾಪೂರ್ಣ ಪವಾಡ ಪುರುಷ ಶಿವಯೋಗಿಗಳು





ಶ್ರೀ ಮ.ನಿ.ಪ್ರ ಬಾಲಲೀಲಾ ಮಹಾಂತ ಶಿವಯೋಗಿಗಳು
ವಿರಕ್ತಮಠ ಯರನಾಳ ಗವಿಮಠ-ಮುಳಗುಂದ

ಬಾಲಲೀಲಾ ಮಾಹಾಂತ ಶಿವಯೋಗಿಗಳು ವಿಜಾಪುರ ಜಿಲ್ಲೆಯ ಯರನಾಳ ಎಂಬ ಗ್ರಾಮದಲ್ಲಿ ಅಂದಾಜು 1823ರಲ್ಲಿ ಜನ್ಮ ತಾಳಿದರು. ಕೆಲವು ಕಾಲ ಯರನಾಳ ಹಿರೇಮಠದಲ್ಲಿ ಇದ್ದು, ಎಂಟು ವರ್ಷ ಕಳೆದ ಮೇಲೆ ಬಾಲಕ ಮಹಾಂತೇಶನು ಕಡು ವೈರಾಗ್ಯವನ್ನು ತಾಳಿ, ಶಿವಕ್ಷೇತ್ರಗಳನ್ನು ಸಂಚರಿಸುತ್ತ ಬಳ್ಳಾರಿ ಜಿಲ್ಲೆಯ ಲಿಂಗನಾಯಕನಹಳ್ಳಿಯ ಅಪ್ರತಿಮ ಅನುಭಾವಿಗಳಾದ ಹಾಲಹರ್ತಿಯ ಶ್ರೀಚನ್ನವೀರ ಮಹಾಶಿವಯೋಗಿಗಳ ಶ್ರೀಮಠಕ್ಕೆ ಬಂದು, ಅವರ ಪರಮ ಅನುಗ್ರಹಕ್ಕೆ ಪಾತ್ರರಾದರು. ಅವರ ಶಿಷ್ಯೋತ್ತಮರಲ್ಲಿ ಒಬ್ಬರಾದ ಶ್ರೀ ಶಾಂತವೀರ ಚರಮೂರ್ತಿಗಳಿಂದ ಅನುಗ್ರಹ ಹಾಗೂ ಷಸ್ಥಲ ಬ್ರಹ್ಮೋಪದೇಶ ಪಡೆದರು.

ಮಹಾಂತೇಶ್ವರರು ಯಾವ ನಿರ್ದಿಷ್ಟವಾದ ನೆಲೆಯನ್ನು ಆಶ್ರಯಿಸದೇ, ವಿವಿಧ ಕ್ಷೇತ್ರಗಳಲ್ಲಿ ತಮ್ಮ ಅದ್ಭುತ ಪವಾಡಗಳನ್ನು ಮೆರೆದರು. ಬಳಿಕ ಭಕ್ತರ ಪರಮ ಪ್ರೇಮದ ಕಟ್ಟುಪಾಡಿಗೆ ಒಳಪಟ್ಟು ಮುಳಗುಂದದ ಶ್ರೀ ಗವಿಮಠದಲ್ಲಿ ಬಂದು ನೆಲೆಸಿದರು. ಮಹಾಮಾತೆ ಬಸವಾಂಬೆಯ ಪ್ರೀತಿಯ ಪುತ್ರನಾಗಿ ಬಾಲಲೀಲೆಗಳನ್ನು ತೋರಿದರು.

ಮಹಾಂತ ಶಿವಯೋಗಿಗಳು ಬರೆದ 'ಕೈವಲ್ಯ ದರ್ಪಣ'ದಲ್ಲಿನ ವಿಷಯಗಳು ಮನಸ್ಸಿನ ನೆಮ್ಮದಿಯನ್ನು ನೀಡುತ್ತವೆ. ಅತ್ತಿತ್ತ ಹರಿಯುವ ಮನವನ್ನು ಗೆಲ್ಲುವುದು ಕಡುಕಷ್ಟ. ಸುಜ್ಞಾನ ಜಲವನ್ನು ಎರೆದು ರಕ್ಷಿಸು ಎಂದು ಭಗವಂತನನ್ನು ಪ್ರಾರ್ಥಿಸಿದ್ದರು. ಮನಸ್ಸು ಮರ್ಕಟ, ಬುದ್ಧಿ ಅಂಕುಶ, ಸಂಚಲತೆ ಮನಸ್ಸಿನ ನಿಜ ನಿಯಮ. ಲೋಕಮುಖವಾಗಿ, ಅಧೋಗತಿಗೆ ಹೋಗುವ ಮನಸ್ಸನ್ನು ತಡೆಹಿಡಿಯಬೇಕು. ಮನ ಉನ್ಮನವಾಗಬೇಕು, ಕ್ಷಣ ಮನವಾಗಬೇಕು. ಆಧ್ಯಾತ್ಮಿಕ ಜೀವನದ ಸಾರಸ ಲಕ್ಷಣಗಳನ್ನು ಮಹಾಂತೇಶ್ವರರು ಪ್ರಾರ್ಥನೆಯಲ್ಲಿ ಕೇಳಿಕೊಂಡಿದ್ದಾರೆ.

ಶ್ರೀ ಬಾಲಲೀಲಾ ಮಹಾಂತ ಶಿವಯೋಗಿಗಳು ಮೈಸೂರಿನ ಅರಸ ಮುಮ್ಮಡಿ ಕೃಷ್ಣರಾಜ ಒಡೆಯರ ಪ್ರಾರ್ಥನೆಯನ್ನು ಪರಿಗಣಿಸಿ, ಅವರಿಗೆ ಒದಗಿದ್ದ, ವಾಸಿಯಾಗಲಾರದಂತಹ ಮಹಾರೋಗವನ್ನು ಪರಿಹರಿಸಿ ಅರಸನ ಕೃಪೆಗೆ ಪಾತ್ರರಾದರು. ನಂತರ ಅರಸರು ಅರ್ಪಿಸಿದ ಮುತ್ತುರತ್ನಗಳನ್ನು ಬಯಸದೇ, ಒಂದು ಕುಂಬಳಕಾಯಿ ಬುರುಡೆಯನ್ನು ಮಾತ್ರ ಸ್ವೀಕರಿಸಿದರೆಂಬುದು ವಿಶೇಷ. ಅಂದು ಪಡೆದ ಆ ಕುಂಬಳಕಾಯಿಯ ಬುರುಡೆ ಶ್ರೀಗಳ ಮಠದಲ್ಲಿ ಇಂದಿಗೂ ನೋಡಲು ಸಿಗುತ್ತದೆ. ಈ ಮಹಿಮರ ಪರಿಪೂರ್ಣ ವೈರಾಗ್ಯ ನಿಷ್ಠೆಯನ್ನು, ನಿಜ ತತ್ವದ ನಿಲುವನ್ನು, ವ್ಯಕ್ತಿತ್ವ ಅನುಭವದ ದರ್ಶನ ಸ್ಪಷ್ಟವಾಗಿ ಕಾಣಿಸುತ್ತಿದೆ.

ನೀರಿಲ್ಲದ ಬಾವಿಯಲ್ಲಿ ಸವಿಯಾದ ಜಲ ಬರುವಂತೆ ಮಾಡಿದುದು, ಟೊಪ್ಪಿಗೆಯಲ್ಲಿ ಕುಳಿತು ಹೊಳೆ ದಾಟಿದ್ದು, ಮುಳಗುಂದದ ಭಕ್ತರಿಗೆ ಗವಿಮಠದಲ್ಲಿಯೇ ಉಳವಿಯ ಜಾತ್ರೆಯ ದರ್ಶನ ಮಾಡಿಸಿದ ಅದ್ಭುತ ಲೀಲಾ ಪ್ರಸಂಗಗಳು ಹೃದಯಂಗಮವಾಗಿ ನಡೆದಿವೆ. ಇಂತಹ ಹತ್ತು ಹಲವು ಪವಾಡಗಳನ್ನು ಮಾಡಿದ ಶ್ರೀ ಬಾಲಲೀಲಾ ಮಹಾಂತೇಶ್ವರರ ಸದ್ಗುಣ ಚಾರಿತ್ರ್ಯ, ಮಹಿಮಾಪೂರ್ಣ ವ್ಯಕ್ತಿತ್ವವನ್ನು ವರ್ಣಿಸಲು ಅಸಾಧ್ಯವಾದದು.

ಮಹಾಂತೇಶ್ವರರು ಅಂತಃಸ್ಫೂರ್ತಿ ಬಂದಾಗ ಶ್ರೀಮಠದ ತೊಲೆ, ಬೋಧಿಗೆಯ ಮೇಲೆ ಬರೆದ ಅಂದಿನ ಹಾಡುಗಳನ್ನು ಸಂಗ್ರಹಿಸಿ, ಸಂರಕ್ಷಿಸಿರುವ ಅವರ ನೆಚ್ಚಿನ ಶಿಷ್ಯ ಶ್ರೀ ಮರಿದೇವರನ್ನು ನಾವು ಸ್ಮರಿಸಲೇಬೇಕು. ಆ ಹಾಡುಗಳ ಸಂಗ್ರಹವೇ ಕೈವಲ್ಯ ದರ್ಪಣವೆಂದು ಪ್ರಸಿದ್ಧಿಯಾಗಿದೆ. ಜಗದ್ಗುರು ಎಂದಾಗುವವರು ಮೊದಲು ಜಗತ್ ಪುತ್ರರಾಗಬೇಕೆಂಬ ಸೂಚನೆ ಸ್ವಾಮಿಗಳಿಗೆ ಕೊಟ್ಟಿರುವುದು ಅತ್ಯಂತ ಮಾರ್ಮಿಕವಾಗಿದೆ. ಒಟ್ಟಾರೆ ಮಹಾಂತ ಶಿವಯೋಗಿಗಳವರ ಜೀವನ ಅತ್ಯದ್ಭುತ, ಅಮೃತಮಯ, ತೇಜೋಪೂರ್ಣ.

ಪ್ರಸ್ತುತ ಡಾ. ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ಗವಿಮಠವನ್ನು ಜೀರ್ಣೋದ್ಧಾರ ಮಾಡಿ ಪ್ರತಿ ಅಮವಾಸ್ಯೆಯಂದು ವಿಶೇಷ ಪೂಜಾ ಕೈಂಕರ್ಯ ಜೊತೆಯಲ್ಲಿ ಭಕ್ತರಿಂದ ಅನ್ನ ಪ್ರಸಾದ ಸೇವೆ ಜರಗುವುದರ ಜೊತೆಯಲ್ಲಿ ಶ್ರಾವಣ ಮಾಸದಲ್ಲಿ ಶರಣರ ಪ್ರವಚನಗಳು, ಕಾರ್ತಿಕ ಮಾಸದಲ್ಲಿ ಲಕ್ಷ ದೀಪೋತ್ಸವ ಹೀಗೆ ಹತ್ತಾರು ಕಾರ್ಯಕ್ರಮ ಜರಗುವಂತೆ ಮುನ್ನಡೆಸುತ್ತಿದ್ದಾರೆ.

ಇಂತಹ ಪುಣ್ಯ ಪುರುಷರ ಜಾತ್ರಾ ಮಹೋತ್ಸವವು ಜ. 30ರಿಂದ ಫೆ. 1ರವರೆಗೆ ನೆರವೇರುವದು. ಈ ಜಾತ್ರೆಯಲ್ಲಿ ಸಂತರು, ಶರಣರಿಂದ ಅನುಭಾವಗೋಷ್ಠಿ ಜರುಗುವುದು. ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದ್ದು, ಸದ್ಭಕ್ತರೆಲ್ಲರೂ ಭಾಗವಹಿಸಿ ಶಿವಯೋಗಿಗಳ ಕೃಪಾಶೀರ್ವಾದಕ್ಕೆ ಪಾತ್ರರಾಗಬೇಕೆಂದು ಜಾತ್ರಾ ಸಮಿತಿಯ ಗೌರವ ಕಾರ್ಯದರ್ಶಿ ಹೊನ್ನಪ್ಪ ನೀಲಗುಂದ ವಿನಂತಿಸಿದ್ದಾರೆ.

**- ಶ್ರೀಕಾಂತ ವೀ.ಸಿದ್ದನಗೌಡರ.**

**ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ ಜಯಂತಿ ಆಚರಣೆ**

# ಶರಣರ ಪರಂಪರೆಯಲ್ಲಿ ಮುನ್ನಡೆಯೋಣ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸುಣಗಾರ ಓಣಿಯಲ್ಲಿ ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ವತಿಯಿಂದ 12ನೇ ಶತಮಾನದ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು.

ಯುವ ಮುಖಂಡ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, 12ನೇ ಶತಮಾನದ ಶರಣರು ಜಾತಿ ರಹಿತ, ಸಮ ಸಮಾಜ ಕಟ್ಟುವ ಕನಸು ಕಂಡಿದ್ದರು. ಸಮಾಜದಲ್ಲಿರುವ ಮೂಢನಂಬಿಕೆಯನ್ನು ಬೇರು ಸಮೇತ ಕಿತ್ತಹಾಕಲು ವಚನಗಳ ಮೂಲಕ ಜನರಲ್ಲಿ ಜಾಗೃತಿ ಮೂಡಿಸಿದ ನಿಜ ಶರಣ ಅಂಬಿಗರ ಚೌಡಯ್ಯನವರು ಎಂದು ಸ್ಮರಿಸಿದರು.

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜ ಟ್ರಸ್ಟ್ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ಮಾತನಾಡಿ, ಶರಣರ ಪರಂಪರೆಯಲ್ಲಿ ಮುನ್ನಡೆಯೋಣ. ಪಾಶ್ಚಾತ್ಯ ಸಂಸ್ಕೃತಿಗಳನ್ನು ಬಿಟ್ಟು ಶರಣ ಸಂಸ್ಕೃತಿಗೆ ಅಂಟಿಕೊಳ್ಳಲಿ ಎಂದರು.

ಗದಗ ಜಿಲ್ಲಾ ಕೆಪಿಸಿಸಿ ಮೀನುಗಾರರ ವಿಭಾಗದ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ ಮಾತನಾಡಿ, ಸಮುದಾಯದ ಜನ ಸಂಘಟನೆ, ಹೋರಾಟ, ಶಿಕ್ಷಣ ಮಾನವೀಯ ಮೌಲ್ಯವನ್ನು ಮಕ್ಕಳಿಗೆ ಕಲಿಸೋಣ. ಅಂದಾಗ ಶರಣರ ಪರಂಪರೆಗೆ ಮೆರುಗು ಬರುತ್ತದೆ ಎಂದರು.

ಸಮಾಜದ ಮಹಿಳಾ ಅಧ್ಯಕ್ಷರಾದ ಸುಜಾತ ಗುಡಿಸಾಗರ ನೇತೃತ್ವದಲ್ಲಿ ಮಹಿಳೆಯರು ಕುಂಭ ಮೆರವಣಿಗೆಗೆ ಶೋಭೆ ತಂದರು. ಈ ಸಂದರ್ಭದಲ್ಲಿ ಅಂಬಿಗರ ಸಮಾಜ ಟ್ರಸ್ಟ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ, ಉಪಾಧ್ಯಕ್ಷ ಪ್ರವೀಣ ನೀಲಣ್ಣವರ, ಯುವ ಘಟಕದ ಅಧ್ಯಕ್ಷ ಮಂಜುನಾಥ ಗುಡಿಸಾಗರ, ಖಜಾಂಚಿ ಹನಮಂತ ಅಂಬಿಗೇರ, ರಾಜೂ ಪೂಜಾರ, ರಮೇಶ ಬೆನಕಲ್ಲ, ಬಸವರಾಜ ಗುಡಿಸಾಗರ, ಮಲ್ಲಿಕಾರ್ಜುನ ಬಾರಕೇರ, ನಾಗರಾಜ ಬಾರಕೇರ, ನಾರಾಯಣ ನರಗುಂದ, ಪ್ರಕಾಶ ಬಿನ್ನಾಳ, ರಾಜು ಗುಡಿಸಾಗರ, ಅಶೋಕ ಜಕನೂರ, ಅಮಿತ ಪೂಜಾರ, ಮಧು ಪೂಜಾರ, ಹರೀಶ ಬಾರಕೇರ, ಸಮಾಜದ ಮುಖಂಡರು ಪಾಲ್ಗೊಂಡಿದ್ದರು.

# ಜಿಲ್ಲಾ ಬ್ಯಾಂಕ್ ನೌಕರ ಸಂಘದಿಂದ ಧರಣಿ




■ವಿಜಯಸಾಕ್ಷಿ ಸುದ್ದಿ, ಗದಗ

ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ (ಯುಎಫ್‌ಬಿಯು)ರಾಷ್ಟ್ರವ್ಯಾಪಿ ಒಂದು ದಿನದ ಮುಷ್ಕರಕ್ಕೆ ಕರೆ ನೀಡಿದ್ದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಘಟಕವು ನಗರದ ಗಾಂಧಿ ಸರ್ಕಲ್ ಬಳಿ ಕೆನರಾ ಬ್ಯಾಂಕ್ ಮುಂಭಾಗದಲ್ಲಿ ಮುಷ್ಕರ ನಡೆಸಿದರು.

ಗದಗ ಜಿಲ್ಲಾ ಬ್ಯಾಂಕ್ ನೌಕರರ ಪ್ರಧಾನ ಕಾರ್ಯದರ್ಶಿಕಾಮ್ರೆಡ್ ಹನುಮೇಶ್ ಎಮ್.ಗಂಗರಾಹುತರ ಹಾಗೂ ಗದಗ ಜಿಲ್ಲಾ ಗಈಃಗ ಘಟಕದ ಕನ್ವೀನರ್ ಕಾಮ್ರೆಡ್ ಅಮರೇಶ್ವರ ಕೆ ಪ್ರತಿಭಟನೆಯ ನೇತೃತ್ವ ವಹಿಸಿದ್ದರು.

5 ದಿನಗಳ ಬ್ಯಾಂಕಿಂಗ್ ವ್ಯವಸ್ಥೆ ಜಾರಿಗೊಳಿಸುವಂತೆ ಕೇಂದ್ರ ಸರ್ಕಾರ ಮತ್ತು ಹಣಕಾಸು ಸಚಿವಾಲಯವನ್ನು ಒತ್ತಾಯಿಸಿ ಈಗಾಗಲೇ ಐಬಿಎ ಹಾಗೂ ಬ್ಯಾಂಕ್ ಕಾರ್ಮಿಕ ಸಂಘಗಳ ನಡುವೆ ಒಪ್ಪಿಗೆಯಾಗಿ ಅದರ ಅನುಮೋದನೆಗಾಗಿ ಕೇಂದ್ರ ಹಣಕಾಸು ಸೇವೆಗಳ ಇಲಾಖೆಗೆ ಕಳುಹಿಸಲಾಗಿದೆ.

ಆದರೆ ಒಪ್ಪಂದವಾಗಿ ಎರಡು ವರ್ಷಗಳು ಕಳೆದರೂ ಅಲ್ಲಿ ಅನಗತ್ಯವಾಗಿ ವಿಳಂಬ ಧೋರಣೆಯನ್ನು ಅನುಸರಿಸಲಾಗುತ್ತಿದೆ. ಆದ್ದರಿಂದ ಕೇಂದ್ರ ಸರ್ಕಾರ ಈ ಕೂಡಲೇ ಮಧ್ಯಪ್ರವೇಶಿಸಿ ಬ್ಯಾಂಕ್ ಉದ್ಯೋಗಿಗಳ ನ್ಯಾಯಯುತವಾದ ಬೇಡಿಕೆಯನ್ನು ಈಡೇರಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದರು.

ಮುಷ್ಕರದಲ್ಲಿ ಕಾಮ್ರೆಡ್ ಬಾಲಾಜಿ ಕುಲಕರ್ಣಿ, ಕಾಮ್ರೆಡ್ ಮಂಜುನಾಥ ಭಜಂತ್ರಿ, ಕಾಮ್ರೆಡ್ ಮಂಜುನಾಥ ದೊಡ್ಡಮನಿ, ಕಾಮ್ರೆಡ್ ಶಿವಾನಂದ್, ಕಾಮ್ರೆಡ್ ಯಚ್ಚರಸ್ವಾಮಿ ನಾಯಕ, ಕಾಮ್ರೆಡ್ ಅಶೋಕ ಗೌಡ್ರ, ಕಾಮ್ರೆಡ್ ಪ್ರೇಮ್, ಕಾಮ್ರೆಡ್ ಸೂರ್ಯ ಕುಮಾರ್, ಕಾಮ್ರೇಡ್ ಹರೀಶ್ ಲೋಕಾಪುರ್, ಕಾಮ್ರೇಡ್ ರಾಜು ಸಿಂಗಾಡಿ, ಕಾಮ್ರೆಡ್ ದೀಪಕ್ ಕೊಲ್ಲಾಪುರಿ, ಕಾಮ್ರೆಡ್ ದೀಪು ಮಾಲಾ, ನೇಹಾ, ಸುಧಾರಾಣಿ, ಪ್ರೀತಿ, ಲೋಕೇಶ್, ಕಾಮ್ರೆಡ್ ವಿಜಯ್, ಕಾಮ್ರೆಡ್ ವಿನೋದ್ ಹೊಸೂರ, ಮೌಲಾಸಾಬ್, ಗಾಯತ್ರಿ, ಶಿಲ್ಪಾ, ಪ್ರಿಯ ಸಜ್ಜನ್, ಚೈತ್ರ, ಪ್ರದೀಪ್, ಮಂಜುನಾಥ ಭಜಂತ್ರಿ ಮುಂತಾದವರು ಪಾಲ್ಗೊಂಡಿದ್ದರು.

## 'ವಿಳಂಬವಾದರೂ ಸ್ವಾಗತಾರ್ಹ ಹೆಜ್ಜೆ ; ಕೇಂದ್ರದ ಯುಜಿಸಿ ನಿಯಮಗಳನ್ನು ಪ್ರಶಂಸಿದ ಸಿಎಂ ಸ್ಟಾಲಿನ್

■ವಿಜಯಸಾಕ್ಷಿ ಸುದ್ದಿ, ಕೇರಳ



ಯುಜಿಸಿ (ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಈಕ್ವಿಟಿ ಪ್ರಚಾರ) ನಿಯಮಗಳು, 2026 "ಆಳವಾಗಿ ಬೇರೂರಿರುವ ತಾರತಮ್ಯ ಮತ್ತು ಸಾಂಸ್ಥಿಕ ನಿರಾಸಕ್ತಿಯಿಂದ ಬಳಲುತ್ತಿರುವ ಉನ್ನತ ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸುವಲ್ಲಿ ವಿಳಂಬವಾದರೂ ಸ್ವಾಗತಾರ್ಹ ಹೆಜ್ಜೆಯಾಗಿದೆ" ಎಂದು ತಮಿಳುನಾಡು ಮುಖ್ಯಮಂತ್ರಿ ಎಂಕೆ ಸ್ಟಾಲಿನ್ ಗುರುವಾರ ಹೇಳಿದ್ದಾರೆ.

ನಿಯಮಗಳ ವಿರುದ್ಧ ಪ್ರಬಲಜಾತಿ ಗುಂಪು ನಡೆಸುತ್ತಿರುವ ಬೃಹತ್ ಅಭಿಯಾನದ ಮಧ್ಯೆ ಅವರ ಹೇಳಿಕೆಗಳು ಬಂದಿವೆ. ಜಾತಿ ಮತ್ತು ಎಲ್ಲ ರೀತಿಯ ತಾರತಮ್ಯವನ್ನು ಪರಿಹರಿಸುವ ಹೊಸ ನಿಯಮಗಳು ಸಾಮಾನ್ಯ ವರ್ಗದ ವಿದ್ಯಾರ್ಥಿಗಳನ್ನು 'ಸಂಭಾವ್ಯ ಪರಭಕ್ಷಕ'ರಂತೆ ಚಿತ್ರಿಸುತ್ತವೆ ಎಂದು ಪ್ರತಿಭಟನಾಕಾರರು ವಾದಿಸುತ್ತಿದ್ದಾರೆ.

ನಿಯಮಗಳ ವಿರುದ್ಧದ ಅಭಿಯಾನವು 'ಪ್ರತಿಗಾಮಿ ಮನಸ್ಥಿತಿ'ಯ ಪ್ರತಿಬಿಂಬವಾಗಿದೆ ಎಂದು ಸ್ಟಾಲಿನ್ ಬಣ್ಣಿಸಿದ್ದಾರೆ.


"ಕೇಂದ್ರ ಮಟ್ಟದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ, ಭಾರತೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ವಿಶೇಷವಾಗಿ ಎಸ್‌ಸಿ ಮತ್ತು ಎಸ್‌ಟಿ ವಿದ್ಯಾರ್ಥಿಗಳಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆಯಲ್ಲಿ ಗಮನಾರ್ಹ ಏರಿಕೆ ಕಂಡುಬಂದಿದೆ. ಇದರೊಂದಿಗೆ ದಕ್ಷಿಣ ಭಾರತ, ಕಾಶ್ಮೀರ ಮತ್ತು ಅಲ್ಪಸಂಖ್ಯಾತ ಸಮುದಾಯಗಳ ವಿದ್ಯಾರ್ಥಿಗಳನ್ನು ಗುರಿಯಾಗಿಸಿಕೊಂಡು ಪದೇ ಪದೇ ದಾಳಿಗಳು ಮತ್ತು ಕಿರುಕುಳಗಳು ನಡೆದಿವೆ. ಈ ಸಂದರ್ಭದಲ್ಲಿ, ಈಕ್ವಿಟಿ ಸುರಕ್ಷತೆಗಳು ಆಯ್ಕೆಯ ವಿಷಯವಲ್ಲ. ಆದರೆ, ಅನಿವಾರ್ಯ ಅವಶ್ಯಕತೆಯಾಗಿದೆ" ಎಂದು ಸ್ಟಾಲಿನ್ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದ್ದಾರೆ.

"ಜಾತಿ ತಾರತಮ್ಯವನ್ನು ತೊಡೆದುಹಾಕುವ ಮತ್ತು ಈ ಚೌಕಟ್ಟಿನೊಳಗೆ ಒಬಿಸಿಗಳನ್ನು ಸೇರಿಸುವ ಹೇಳಲಾದ ಗುರಿಗಳು ಬೆಂಬಲಕ್ಕೆ ಅರ್ಹವಾಗಿವೆ. ಮಂಡಲ್ ಆಯೋಗದ ಶಿಫಾರಸುಗಳ ಆಧಾರದ ಮೇಲೆ ಮೀಸಲಾತಿಗಳನ್ನು ಅನುಷ್ಠಾನಗೊಳಿಸುವ ಸಮಯದಲ್ಲಿ ಕಂಡುಬರುವಂತೆ, ಪ್ರಸ್ತುತ 'ಯುಜಿಸಿ ರೋಲ್‌ಬ್ಯಾಕ್' ಹಿನ್ನಡೆಯು ಅದೇ ಹಿಂಜರಿತದ ಮನಸ್ಥಿತಿಯಿಂದ ನಡೆಸಲ್ಪಡುತ್ತದೆ. ಕೇಂದ್ರ ಸರ್ಕಾರವು ಈ ನಿಯಮಗಳನ್ನು ಅಥವಾ ಅವುಗಳ ಮೂಲ ಉದ್ದೇಶಗಳನ್ನು ದುರ್ಬಲಗೊಳಿಸಲು ಅಂತಹ ಒತ್ತಡವನ್ನು ಅನುಮತಿಸಬಾರದು" ಎಂದು ಅವರು ಸಲಹೆ ನಿಡಿದ್ದಾರೆ.

"ರೋಹಿತ್ ವೇಮುಲಾ ಅವರ ಆತ್ಮಹತ್ಯೆಯಂತಹ ಪ್ರಕರಣಗಳು, ಕುಲಪತಿಗಳು ಸ್ವತಃ ಆರೋಪಗಳನ್ನು ಎದುರಿಸಿದರು, ವಿಶೇಷವಾಗಿ ಅನೇಕ ಉನ್ನತ ಶಿಕ್ಷಣ ಸಂಸ್ಥೆಗಳು ಆರ್‌ಎಸ್‌ಎಸ್ ಬೆಂಬಲಿಗರ ನೇತೃತ್ವದಲ್ಲಿದ್ದಾಗ, ಸಾಂಸ್ಥಿಕ ಮುಖ್ಯಸ್ಥರ ಅಧ್ಯಕ್ಷತೆಯ ಈಕ್ವಿಟಿ ಸಮಿತಿಗಳು ಸ್ವತಂತ್ರವಾಗಿ ಹೇಗೆ ಕಾರ್ಯನಿರ್ವಹಿಸುತ್ತವೆ ಎಂಬುದನ್ನು ನೋಡುವುದು ಕಷ್ಟಕರವಾಗಿಸುತ್ತದೆ" ಎಂದು ಡಿಎಂಕೆ ಮುಖ್ಯಸ್ಥರು ಹೇಳಿದರು. "ವಿದ್ಯಾರ್ಥಿಗಳ ಸಾವುಗಳನ್ನು ತಡೆಗಟ್ಟುವುದು, ತಾರತಮ್ಯವನ್ನು ಕೊನೆಗೊಳಿಸುವುದು ಮತ್ತು ಹಿಂದುಳಿದ ಸಮುದಾಯಗಳ ವಿದ್ಯಾರ್ಥಿಗಳ ಡ್ರಾಪ್‌ಔಟ್ ಪ್ರಮಾಣವನ್ನು ಕಡಿಮೆ ಮಾಡುವ ಬಗ್ಗೆ ಕೇಂದ್ರ ಬಿಜೆಪಿ ಸರ್ಕಾರ ಗಂಭೀರವಾಗಿದ್ದರೆ, ಈ ನಿಯಮಗಳನ್ನು ಬಲಪಡಿಸುವುದು ಮಾತ್ರವಲ್ಲದೆ ಅವುಗಳ ರಚನಾತ್ಮಕ ಅಂತರವನ್ನು ಪರಿಹರಿಸಲು ಪರಿಷ್ಕರಿಸಬೇಕು, ನಿಜವಾದ ಹೊಣೆಗಾರಿಕೆಯೊಂದಿಗೆ ಜಾರಿಗೊಳಿಸಬೇಕು" ಎಂದು ಹೇಳಿದ್ದಾರೆ.

# ವಿಮಾನ ಪತನ : ಸಂಸದ ಸೇರಿ 15 ಜನರು ಸಾವು

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಬುಧವಾರ (ಜ.28) ಸರ್ಕಾರಿ ಸ್ವಾಮ್ಯದ ವಿಮಾನಯಾನ ಸಂಸ್ಥೆ ಸಟೇನಾ ನಿರ್ವಹಿಸುತ್ತಿದ್ದ ಸಣ್ಣ ಪ್ರಯಾಣಿಕ ವಿಮಾನವು ಈಶಾನ್ಯ ಕೊಲಂಬಿಯಾದ ಪರ್ವತ ಪ್ರದೇಶದಲ್ಲಿ ಪತನಗೊಂಡು ಎಲ್ಲಾ 15 ಪ್ರಯಾಣಿಕರು ಜನರು ಸಾವಿಗೀಡಾಗಿದ್ದಾರೆ.

ದುರಂತದ ಕಾರಣ ಇನ್ನೂ ಸ್ಪಷ್ಟವಾಗಿಲ್ಲ. ಪ್ರತಿಕೂಲ ಹವಾಮಾನ ಪರಿಸ್ಥಿತಿ ಮತ್ತು ಕಷ್ಟಕರವಾದ ಪರ್ವತ ಪ್ರದೇಶವು ಅವಘಡದ ಸಂಭಾವ್ಯ ಕಾರಣಗಳು ಎಂದು ಅಧಿಕಾರಿಗಳು ಹೇಳಿದ್ದಾರೆ. ಅವಘಡಕ್ಕೂ ಮುನ್ನ ವಿಮಾನದ ತುರ್ತು ಸಿಗ್ನಲ್ ಸಕ್ರಿಯಗೊಂಡಿಲ್ಲ ಎಂದು ವರದಿಯಾಗಿದೆ.

ಘಟನೆಯಲ್ಲಿ 13 ಪ್ರಯಾಣಿಕರು ಮತ್ತು 2 ಸಿಬ್ಬಂದಿ ಸೇರಿ 15 ಜನರು ಸಾವಿಗೀಡಾಗಿದ್ದಾರೆ. ಸಂಘರ್ಷದ ಬಲಿಪಶುಗಳನ್ನು ಪ್ರತಿನಿಧಿಸುವ ಕೊಲಂಬಿಯಾದ ಸಂಸತ್ತಿನ ಸದಸ್ಯ 36 ವರ್ಷದ ಡಿಯೋಜೆನೆಸ್ ಕ್ವಿಂಟೆರೊ ಅಮಯಾ, ಕೊಲಂಬಿಯಾ ಸಂಸತ್ ಚುನಾವಣೆಯ ಅಭ್ಯರ್ಥಿ ಮತ್ತು ಸಾಮಾಜಿಕ ಕಾರ್ಯಕರ್ತ ಕಾರ್ಲೋಸ್ ಸಾಲ್ಸೆಡೊ ಮತ್ತು ಕ್ಯಾಪ್ಟನ್ ಮಿಗುಯೆಲ್ ವನೆಗಾಸ್ ಮತ್ತು ಕ್ಯಾಪ್ಟನ್ ಜೋಸ್ ಡೆ ಲಾ ವೆಗಾ ಎಂಬ ಇಬ್ಬರು ಸಿಬ್ಬಂದಿ ಸಾವನ್ನಪ್ಪಿದವರಲ್ಲಿ ಪ್ರಮುಖರು.

ವಿಮಾನವು ಸ್ಥಳೀಯ ಸಮಯ ಬೆಳಿಗ್ಗೆ 11:42ಕ್ಕೆ ಕುಕುಟಾದ ಕ್ಯಾಮಿಲೊ ದಾಜಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಓಕಾನಾದ ಅಗುವಾಸ್ ಕ್ಲಾರಾಸ್ ವಿಮಾನ ನಿಲ್ದಾಣಕ್ಕೆ ಹೊರಟಿತ್ತು. ಟೇಕ್ ಆಫ್ ಆದ ಸುಮಾರು 12 ನಿಮಿಷಗಳ ನಂತರ ಮತ್ತು ನಿಗದಿತ ಲ್ಯಾಂಡಿಂಗ್‌ಗೆ ಸುಮಾರು 11 ನಿಮಿಷಗಳ ಮೊದಲು, ಬೆಳಿಗ್ಗೆ 11:54 ಕ್ಕೆ ಸಂಪರ್ಕ ಕಡಿತಗೊಂಡಿತ್ತು ಎಂದು ವರದಿಯಾಗಿದೆ.

ಘಟನೆಯ ಕುರಿತು ಕೊಲಂಬಿಯಾದ ನಾಗರಿಕ ವಿಮಾನಯಾನ (ಏರೋಸಿವಿಲ್) ಮತ್ತು ಸಾರಿಗೆ ಸಚಿವಾಲಯವು ಔಪಚಾರಿಕ ತನಿಖೆಯನ್ನು ಪ್ರಾರಂಭಿಸಿದೆ.

ಪುಣೆಯ ಬಾರಾಮತಿಯಲ್ಲಿ ವಿಮಾನ ಪತನಗೊಂಡು ಮಹಾರಾಷ್ಟ್ರದ ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಸೇರಿದಂತೆ ಐವರು ಸಾವನ್ನಪ್ಪಿದ ದಿನವೇ ಕೊಲಂಬಿಯಾದಲ್ಲಿ ಈ ದುರಂತ ಸಂಭವಿಸಿದೆ.

# ಅಜಿತ್ ಪವಾರ್ ವಿಮಾನ ದುರಂತ: ಅಪಘಾತ ಸ್ಥಳದಲ್ಲಿ ಬ್ಲಾಕ್ ಬಾಕ್ಸ್ ಪತ್ತೆ..!

■ **ವಿಜಯಸಾಕ್ಷಿ ಸುದ್ದಿ, ಪುಣೆ**

ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಮತ್ತು ಇತರ ನಾಲ್ವರು ಸಾವನ್ನಪ್ಪಿದ ಬಾರಾಮತಿ ವಿಮಾನ ನಿಲ್ದಾಣದಲ್ಲಿ ಬುಧವಾರ ಸಂಭವಿಸಿದ ವಿಮಾನ ಅಪಘಾತದ ತನಿಖೆಯ ಕುರಿತು ನಾಗರಿಕ ವಿಮಾನಯಾನ ಸಚಿವಾಲಯ (MoCA) ಗುರುವಾರ ಹೇಳಿಕೆ ನೀಡಿದೆ. ಲಿಯರ್‌ಜೆಟ್ 45 ವಿಮಾನ ಅಪಘಾತದ ತನಿಖೆ ತ್ವರಿತವಾಗಿ ಪ್ರಗತಿಯಲ್ಲಿದೆ ಎಂದು ಸಚಿವಾಲಯ ತಿಳಿಸಿದೆ.

"ತನಿಖೆ ಸಂಪೂರ್ಣ, ಪಾರದರ್ಶಕ ಮತ್ತು ಸಮಯಕ್ಕೆ ಸೀಮಿತವಾದ ವಿಚಾರಣೆಯನ್ನು ಖಚಿತಪಡಿಸಿಕೊಳ್ಳುವುದು ಪ್ರಮುಖ ಆದ್ಯತೆಯಾಗಿದೆ" ಎಂದು ಸಚಿವಾಲಯವು ಕುರಿತ ಪೋಸ್ಟ್‌ನಲ್ಲಿ ತಿಳಿಸಿದೆ.

ದೆಹಲಿಯ ವಿಮಾನ ಅಪಘಾತ ತನಿಖಾ ಬ್ಯೂರೋ (AAIB) ದ ಮೂವರು ಅಧಿಕಾರಿಗಳ ತಂಡ ಮತ್ತು ಮುಂಬೈ ಪ್ರಾದೇಶಿಕ ಕಚೇರಿಯ ನಾಗರಿಕ ವಿಮಾನಯಾನ ನಿರ್ದೇಶನಾಲಯ (DGCA) ದ ಮೂವರು ಅಧಿಕಾರಿಗಳ ತಂಡ ಜನವರಿ 28 ರಂದು ಅಪಘಾತದ ಸ್ಥಳಕ್ಕೆ ತಲುಪಿದೆ ಎಂದು ಸಚಿವಾಲಯ ತಿಳಿಸಿದೆ. AAIB ಮಹಾನಿರ್ದೇಶಕರು ಸಹ ಅದೇ ದಿನ ಸ್ಥಳಕ್ಕೆ ಆಗಮಿಸಿದರು.

"ತನಿಖೆ ತ್ವರಿತವಾಗಿ ಪ್ರಗತಿಯಲ್ಲಿದ್ದು, ದುರದೃಷ್ಟಕರ ವಿಮಾನದ ( ಬ್ಲಾಕ್ ಬಾಕ್ಸ್) ಕಪ್ಪು ಪೆಟ್ಟಿಗೆಯನ್ನು ವಶಪಡಿಸಿಕೊಳ್ಳಲಾಗಿದೆ" ಎಂದು ಸಚಿವಾಲಯ ತಿಳಿಸಿದೆ. ಎಂಒಸಿಎ ಪ್ರಕಾರ, ಎಎಐಬಿ ನಿಯಮಗಳು, 2025 ರ ನಿಯಮಗಳು 5 ಮತ್ತು 11 ರ ಪ್ರಕಾರ ತನಿಖೆಯನ್ನು ಪ್ರಾರಂಭಿಸಲಾಗಿದೆ. ಸ್ಥಾಪಿತ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳು (ಎಸ್‌ಒಪಿಗಳು) ಮತ್ತು ನಿಗದಿಪಡಿಸಿದ ಮಾರ್ಗಸೂಚಿಗಳಿಗೆ ಕಟ್ಟುನಿಟ್ಟಾಗಿ ಅನುಗುಣವಾಗಿ, ನಿರ್ದಿಷ್ಟ ಸಮಯದೊಳಗೆ ತನಿಖೆಯನ್ನು ಪೂರ್ಣಗೊಳಿಸಲು ಸಚಿವಾಲಯವು ಸಂಪೂರ್ಣವಾಗಿ ಬದ್ಧವಾಗಿದೆ ಎಂದು ಹೇಳಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಡಾ. ಪ್ರಶಾಂತ ಧನ್ನೂರ ಮಾಹಿತಿ

# ಫೆ. 1ರಂದು ಸಂಗಮೇಶ್ವರ ಆಸ್ಪತ್ರೆ ಉದ್ಘಾಟನೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಹೊಸ ಬಸ್ ನಿಲ್ದಾಣ ಸಮೀಪದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಗದಗ ಜಿಲ್ಲೆಯ ಪರಿಸರದಲ್ಲಿಯೇ ಬಹುದೊಡ್ಡ ಹಾಗೂ 100 ಹಾಸಿಗೆಯ 'ಶ್ರೀ ಸಂಗಮೇಶ್ವರ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆ'ಯ ನೂತನ ಕಟ್ಟಡದ ಉದ್ಘಾಟನೆ ಫೆ. 1ರಂದು ಬೆಳಗ್ಗೆ 10.30ಕ್ಕೆ ಜರುಗಲಿದೆ ಎಂದು ಡಾ. ಪ್ರಶಾಂತ ಧನ್ನೂರ ಹೇಳಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 18 ಗುಂಟೆ ಜಾಗೆಯಲ್ಲಿ 45 ಸಾವಿರ ಚ.ಅಡಿಯಲ್ಲಿ ಆಸ್ಪತ್ರೆ ನಿರ್ಮಾಣವಾಗಿದ್ದು, ಒಪಿಡಿ ಜತೆಗೆ ಹೈಟೆಕ್ ಹೆರಿಗೆ ಕೊಠಡಿ, ಹೈಟೆಕ್ ಮಾಡ್ಯೂಲರ್ ಆಪರೇಷನ್ ಥೇಟರ್, ಐಸಿಯು, ಎನ್‌ಐಸಿಯು, 24*7 ತುರ್ತು ಚಿಕಿತ್ಸೆ ಕೊಠಡಿ, ಐಯುಐ ಪ್ರಯೋಗಾಲಯ, ಅಲ್ಟ್ರಾ ಸನೋಗ್ರಫಿ, 24*7 ಅಂಬ್ಯುಲೆನ್ಸ್ ಸೇವೆ, ಕಿಡ್ನಿ ಸ್ಟೋನ್, ಪೈಲ್ಸ್, ಪಿಸ್ತೂಲಾ ಹಾಗೂ ವೆರಿಕೋಸ್ವೆದನ್ಗೆಬ ಲೇಸರ್ ಚಿಕಿತ್ಸೆ, ಲ್ಯಾಪ್ರೋಸ್ಕೋಪಿ, ಹಿಸ್ಟ್ರೋಸ್ಕೋಪಿ, ಎಂಡೋಸ್ಕೋಪಿ, ಡಯಾಲಿಸಿಸ್, ಫೋಟೋಥೆರಪಿ, 2ಡಿ ಇಕೋ, ಯುರೋಪ್ಲೊಮೇಟ್ರಿಯಂತಹ ಸೌಲಭ್ಯಗಳು ಇಲ್ಲಿ ಸಿಗಲಿವೆ ಎಂದು ವಿವರಿಸಿದರು.



ವಿವಿಧ 19ಕ್ಕೂ ಅಧಿಕ ಪರಿಣಿತ ಹಾಗೂ ವಿಶೇಷಜ್ಞರಾಗಿರುವ ವೈದ್ಯರ ಸೇವೆ ಇಲ್ಲಿ ಕಾಲಕಾಲಕ್ಕೆ ಸಿಗಲಿದೆ. ಅಲ್ಲದೇ, ಜಿಲ್ಲೆಯ ಜನತೆ ಅಗತ್ಯವಿದ್ದಾಗ ಹೆಚ್ಚಿನ ಚಿಕಿತ್ಸೆಗೆ ಹುಬ್ಬಳ್ಳಿಗೆ ಹೋಗುವ ಅನಿವಾರ್ಯತೆಯಿತ್ತು. ಆದರೆ, ಪ್ರಸ್ತುತ ಈ ಮಲ್ಟಿಸ್ಪೇಷಾಲಿಟಿ ಆಸ್ಪತ್ರೆಯಲ್ಲಿ ಆಧುನಿಕ ಚಿಕಿತ್ಸೆ ಸೌಲಭ್ಯದ ಮೂಲಕ ಆ ಕೊರತೆಯನ್ನು ನೀಗಿಸಿ, ಇಲ್ಲಿಯೇ ಚಿಕಿತ್ಸೆ, ವೈದ್ಯಕೀಯ ಸೇವೆ ಸಿಗಲಿದೆ ಎಂದು ಹೇಳಿದರು.

ಡಂಬಳ-ಗದಗ ಎಡೆಯೂರು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಜ. ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ, ಕೂಲಡಸಂಗಮ ಪಂಚಮಸಾಲಿ ಪೀಠದ ಜ. ಬಸವಜಯ ಮೃತ್ಯುಂಜಯ ಸ್ವಾಮೀಜಿ, ಹಾಲಕೆರೆ-ಹೊಸಪೇಟೆ-ಬಳ್ಳಾರಿ ಅನ್ನದಾನೇಶ್ವರ ಸಂಸ್ಥಾನಮಠದ ಜ. ಮುಪ್ಪಿನಬಸವಲಿಂಗ ಸ್ವಾಮೀಜಿ, ಹರಿಹರ ಪಂಚಮಸಾಲಿ ಪೀಠದ ಜ. ವಚನಾನಂದ ಸ್ವಾಮೀಜಿ, ನರೇಗಲ್ಲ ಹಿರೇಮಠ-ಸವದತ್ತಿ ಮೂಲಿಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ, ಕೊಪ್ಪಳ ಗವಿಮಠ ಸಂಸ್ಥಾನದ ಜ. ಶ್ರೀ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿ, ಡೋಣಿ-ಗದಗ ಕಪ್ಪತ್ತಗುಡ್ಡ ನಂದಿವೇರಿ ಸಂಸ್ಥಾನಮಠದ ಶ್ರೀ ಶಿವಕುಮಾರ ಸ್ವಾಮೀಜಿ, ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ, ಅಬ್ಬಿಗೇರಿ ಹಿರೇಮಠ-ತುಮಕೂರು ಸಿದ್ಧರಬೆಟ್ಟದ ಶ್ರೀ ವೀರಭದ್ರ ಶಿವಾಚಾರ್ಯರು, ಗದಗನ ಸದ್ಗುರು ಮುಕ್ಕಣ್ಣೇಶ್ವರ ಮಠದ ಶ್ರೀ ಶಂಕರಾನಂದ ಸ್ವಾಮೀಜಿ ಸಮಾರಂಭದ ಸಾನ್ನಿಧ್ಯ ವಹಿಸುವರು.

ಬಾಗಲಕೋಟ ಕ್ಷೇತ್ರದ ಮಾಜಿ ಸಂಸದರಾದ ಆರ್.ಎಸ್. ಪಾಟೀಲರ ಅಧ್ಯಕ್ಷತೆಯಲ್ಲಿ ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅವರು ನೂತನ ಆಸ್ಪತ್ರೆಯ ಕಟ್ಟಡವನ್ನು ಉದ್ಘಾಟಿಸುವರು ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರು, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರೂ ಆಗಿರುವ ರೋಣ ಶಾಸಕ ಜಿ.ಎಸ್. ಪಾಟೀಲ, ಎಸ್.ಜಿ. ನಂಜಯ್ಯನಮಠ, ಪದ್ಮಶ್ರೀ ಡಾ. ವಿಜಯ ಸಂಕೇಶ್ವರ, ನರಗುಂದ ಶಾಸಕ ಸಿ.ಸಿ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಇತರರು ಆಗಮಿಸಲಿದ್ದಾರೆ ಎಂದು ಡಾ. ಪ್ರಶಾಂತ ಧನ್ನೂರ ವಿವರಿಸಿದರು.

ಸುದ್ದಿಗೋಷ್ಠಿಯಲ್ಲಿ ಡಾ. ಕೆ.ಬಿ. ಧನ್ನೂರ, ಡಾ. ಅನ್ನಪೂರ್ಣ ಪಿ.ಧನ್ನೂರ, ಪತ್ರಕರ್ತ ಅರುಣ ಕುಲಕರ್ಣಿ ಉಪಸ್ಥಿತರಿದ್ದರು.

# 'ಸಾಧನೆಯ ಮೌನ ಶಿಲ್ಪಿ' ಗ್ರಂಥ ಲೋಕಾರ್ಪಣೆ




■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಯಲ್ ಆಂಗ್ಲಮಾಧ್ಯಮ ಪ್ರೌಢಶಾಲೆಯ ಸಂಸ್ಥಾಪಕರಾದ ದಿವಂಗತ ಎಂ.ಎಂ. ಢಾಲಾಯತ ಗುರುಗಳ ಜೀವನಗಾಥೆ ಕುರಿತಂತೆ ಅವರ ಕೌಟುಂಬಿಕ ಹಿನ್ನೆಲೆ, ಬಾಲ್ಯಜೀವನ, ವಿದ್ಯಾಭ್ಯಾಸ, ವೃತ್ತಿ ಜೀವನ, ಶಿಕ್ಷಕರ ವೃತ್ತಿ ಆರಂಭ, ಎಂ.ಎಂ. ಢಾಲಾಯತ ಗುರುಗಳು ಜನರಿಗೆ ನೀಡಿದ ಆರ್ಥಿಕ ನೆರವು ಹಾಗೂ ಸಮಾಜಸೇವೆಯನ್ನು ಒಳಗೊಂಡ ಒಂದು ಅದ್ಭುತ ಸಾರ್ಥಕ ಜೀವನದ ಕಥೆಯನ್ನು ಒಳಗೊಂಡ 'ಸಾಧನೆಯ ಮೌನ ಶಿಲ್ಪಿ' ಪುಸ್ತಕವನ್ನು ಡಿ.ಎಸ್.ಪಿ ಮುರ್ತುಜಾ ಖಾದ್ರಿ ಲೋಕಾರ್ಪಣೆಗೊಳಿಸಿದರು.

ಪುಸ್ತಕ ಬಿಡುಗಡೆ ಮಾಡುವ ಸಮಾರಂಭವನ್ನು ಸಹಶಿಕ್ಷಕ ಎಸ್.ವಿ. ಅಂಗಡಿ ನಡೆಸಿಕೊಟ್ಟರು. ವೇದಿಕೆಯ ಮೇಲೆ ಮುಖ್ಯ ಅತಿಥಿಗಳಾದ ಡಾ. ಪರಶುರಾಮ ಗುಡಿಮನಿ, ಶಾಲೆಯ ಅಧ್ಯಕ್ಷರಾದ ಎ.ಎಂ. ಢಾಲಾಯತ, ಮುಖ್ಯೋಪಾಧ್ಯಾಯ ಎಸ್.ಎಸ್. ಕುಂಬಾರ, ಸಹ ಶಿಕ್ಷಕರಾದ ಸಿ.ಎಚ್. ಕೊಪ್ಪಳ, ಸಹ ಶಿಕ್ಷಕರಾದ ಎಂ.ವಿ. ಫಿರಂಗಿ, ಸಾಹಿರಾಬಾನು ಢಾಲಾಯತ, ಮಮತಾಜ ಬೇಗಂ ಢಾಲಾಯತ, ಮಂಜುಳಾ ಉಮಚಗಿ, ಜಾಫರ ಖಾಜಿ, ಜೆ.ಜೆ. ಡಂಬಳ, ಕರೀಮ ಸುಣಗಾರ ಉಪಸ್ಥಿತರಿದ್ದರು.

# ಕಲಿಕಾ ಆಸಕ್ತಿ ಮೂಡಿಸಲು ಒತ್ತು ನೀಡಿ



■ **ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಾಲಕರು, ಪೋಷಕರು, ಶಿಕ್ಷಕರ ಸಹಕಾರ ಮಕ್ಕಳ ಕಲಿಕೆಗೆ ಸಹಕಾರಿಯಾಗುತ್ತದೆ ಎಂದು ಎ.ಡಿ. ಮುಜಾವಾರ ಹೇಳಿದರು.

ಅವರು ಪಟ್ಟಣದ ಸರಕಾರಿ ಹಿರಿಯ ಪ್ರಾಥಮಿಕ ಉರ್ದು ಶಾಲೆಯಲ್ಲಿ ಗದಗ ಗ್ರಾಮೀಣ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡಿ, ಕೇವಲ ಶಿಕ್ಷಕರಷ್ಟೇ ಕಲಿಸಬೇಕು ಎನ್ನದೇ ಪಾಲಕರು, ಪೋಷಕರ ಸಹಾಯ-ಸಹಕಾರದಿಂದ ಮಾತ್ರ ಮಕ್ಕಳ ಕಲಿಕಾಭಿವೃದ್ಧಿ ಹೊಂದಲು ಸಹಕಾರಿಯಾಗುತ್ತದೆ ಎಂದರು.

ಉಪನ್ಯಾಸಕಿ ರಂಜನಾ ತೋಳಗೇರಿ ಮಾತನಾಡಿ, ಪ್ರಾಥಮಿಕ ಹಂತದಲ್ಲೇ ಮಕ್ಕಳಿಗೆ ಕಲಿಕಾ ಆಸಕ್ತಿ ಮೂಡಿಸಲು ಪಾಲಕರು ಹಾಗೂ ಶಿಕ್ಷಕರು ಹೆಚ್ಚು ಗಮನ ನೀಡಬೇಕು. ಎಫ್‌ಎಲ್‌ಎನ್ ಕಲಿಕಾ ಹಬ್ಬದ ಉದ್ದೇಶ ಮಕ್ಕಳು ಸರಿಯಾಗಿ ಓದು, ಬರವಣಿಗೆ ಜೊತೆಯಲ್ಲಿ ಗಣಿತದ ಮೂಲಭೂತ ಕೌಶಲ್ಯಗಳನ್ನು ಬಲಪಡಿಸುವುದಾಗಿದೆ ಎಂದರು.

ಗದಗ ಗ್ರಾಮೀಣ ದೈಹೀಕ ಪರಿವೀಕ್ಷಕ ಎಂ.ವಿ. ಪಾಟೀಲ ಮಾತನಾಡಿ, ಶಿಕ್ಷಕರು ನವೀನ ಹಾಗೂ ಸೃಜನಶೀಲ ಬೋಧನಾ ವಿಧಾನಗಳ ಮೂಲಕ ಮಕ್ಕಳಿಗೆ ಕಲಿಸುವುದು ಅವಶ್ಯಕವಾಗಿದ್ದು, ಇದರಿಂದ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಲಿದೆ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಮುಸ್ತಾಕ್ ಅಹ್ಮದ ಅಕ್ಕಿ ವಹಿಸಿದ್ದರು. ಇಸ್ಮಾಯಿಲ್ ಖಾಜಿ, ಐ.ಎಂ. ಶೇಖ, ಅಲ್ಲಾಭಕ್ಷಿ ಹೊಂಬಳ, ವಿ.ಸಿ. ನರೆಗಲ್ಲಮಠ, ಸಿಆರ್‌ಪಿ ಆರ್.ಬಿ. ಖಾದರಣ್ಣನವರ, ಮುನ್ನಾ ಡಾಲಾಯತ, ಗುರುಮಾತೆ ಎಲ್.ಎಂ. ಹಾವೇರಿ, ಆರ್. ಕೆ. ನಾಯಕ, ಅಮಿದಾಬೇಗಂ, ಹುಸೇನ ಕಲೇಗಾರ ಹಾಗೂ ಎಸ್‌ಡಿಎಂಸಿ ಸರ್ವ ಸದಸ್ಯರು, ಸಹ ಶಿಕ್ಷಕರು ಇದ್ದರು.

# ಗ್ರಾಮ ಒನ್ ಕೇಂದ್ರ ತೆರೆಯಲು ಆಗ್ರಹ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಗ್ರಾಮ ಒನ್ ಸೇವಾ ಕೇಂದ್ರ ಪ್ರಾರಂಭಿಸುವಂತೆ ಗ್ರಾ.ಪಂ ಮಾಜಿ ಅಧ್ಯಕ್ಷ ಮತ್ತು ಗದಗ ಜಿಲ್ಲಾ ಅಹಿಂದ ಒಕ್ಕೂಟದ ಅಧ್ಯಕ್ಷ ಸುರೇಶ ಬೀರಣ್ಣವರ ಆಗ್ರಹಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, 5 ಸಾವಿರ ಜನಸಂಖ್ಯೆ ಹೊಂದಿರುವ ಯಳವತ್ತಿ ಗ್ರಾಮದಲ್ಲಿ ಗ್ರಾಮ ಒನ್ ಸೇವಾ ಕೇಂದ್ರ ಇಲ್ಲದ್ದರಿಂದ ಗ್ರಾಮದ ಜನರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಸದ್ಯದ ಪರಿಸ್ಥಿತಿಯಲ್ಲಿ ವಿದ್ಯಾರ್ಥಿಗಳಿಗಂತೂ ಈ ಕೇಂದ್ರದ ಅವಶ್ಯಕತೆ ಸಾಕಷ್ಟಿದೆ. ಆಧಾರ್, ಪಡಿತರ ಕಾರ್ಡ್, ಜಾತಿ ಆದಾಯ ಪ್ರಮಾಣಪತ್ರ, ಉತಾರ, ಜನನ-ಮರಣ ಪ್ರಮಾಣಪತ್ರ ಸೇರಿ ಎಲ್ಲದಕ್ಕೂ 15-20 ಕಿ.ಮೀ ದೂರದ ಲಕ್ಷ್ಮೇಶ್ವರ, ಶಿರಹಟ್ಟಿ, ಗದುಗಿಗೆ ಹೋಗಬೇಕಾದ ಅನಿವಾರ್ಯತೆ ಉಂಟಾಗಿದೆ. ಇದರಿಂದ ಸಮಯ, ಹಣ ವ್ಯಯವಾಗುತ್ತಿದೆಯಲ್ಲದೇ ಮಧ್ಯವರ್ತಿಗಳಿಗೆ ಅವಕಾಶ ಕಲ್ಪಿಸಿಕೊಟ್ಟಂತಾಗುತ್ತಿದೆ.

ಈ ಬಗ್ಗೆ ಸಂಬಂಧಪಟ್ಟ ತಾಲೂಕಾಡಳಿತ, ಜಿಲ್ಲಾಡಳಿತ ಮತ್ತು ಜನಪ್ರತಿನಿಧಿಗಳು ಗಮನ ಹರಿಸಿ ಕೂಡಲೇ ಯಳವತ್ತಿ ಗ್ರಾಮದಲ್ಲಿ ಗ್ರಾಮ ಒನ್ ಸೇವಾ ಕೇಂದ್ರ ತೆರೆಯಬೇಕು ಎಂದು ಆಗ್ರಹಿಸಿದ್ದಾರೆ.

## ಮೀಸಲಾತಿಗಾಗಿ ಪ್ರಬಲ ಜಾತಿಯ ವ್ಯಕ್ತಿ ಬೌದ್ಧ ಧರ್ಮಕ್ಕೆ ಮತಾಂತರ : ಹೊಸ ಬಗೆಯ ವಂಚನೆ ಎಂದ ಸುಪ್ರೀಂ ಕೋರ್ಟ್

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಇಬ್ಬರು ಪ್ರಬಲ ಜಾತಿ ಅಭ್ಯರ್ಥಿಗಳು ಬೌದ್ಧ ಧರ್ಮಕ್ಕೆ ಮತಾಂತರಗೊಂಡಿರುವ ಬಗ್ಗೆ ಮಂಗಳವಾರ (ಜ.27) ಸುಪ್ರೀಂ ಕೋರ್ಟ್ ಗಂಭೀರ ಅನುಮಾನ ವ್ಯಕ್ತಪಡಿಸಿದ್ದು, ಈ ನಡೆಯು ಸ್ನಾತಕೋತ್ತರ ವೈದ್ಯಕೀಯ ಕೋರ್ಸ್‌ಗಳಿಗೆ ಅಲ್ಪಸಂಖ್ಯಾತ ಕೋಟಾದ ಅಡಿಯಲ್ಲಿ ಪ್ರವೇಶ ಪಡೆಯುವ ಪ್ರಯತ್ನದಂತೆ ಕಂಡುಬರುತ್ತಿದೆ ಎಂದು ಅಭಿಪ್ರಾಯಪಟ್ಟಿದೆ. ಬೌದ್ಧ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆ ಎಂದು ಘೋಷಿಸಲಾದ ಉತ್ತರ ಪ್ರದೇಶದ ಸುಭಾರ್ತಿ ವೈದ್ಯಕೀಯ ಕಾಲೇಜಿನಲ್ಲಿ ಬೌದ್ಧ ಅಲ್ಪಸಂಖ್ಯಾತ ಕೋಟಾದಡಿಯಲ್ಲಿ ವೈದ್ಯಕೀಯ ಸ್ನಾತಕೋತ್ತರ ಕೋರ್ಸ್‌ಗೆ ಪ್ರವೇಶ ಪಡೆಯಲು ನಿರ್ದೇಶನಗಳನ್ನು ಕೋರಿ ಹರಿಯಾಣದ ಇಬ್ಬರು ವ್ಯಕ್ತಿಗಳು ಸಲ್ಲಿಸಿದ್ದ ರಿಟ್ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠವು ವಿಚಾರಣೆ ನಡೆಸಿದೆ.

ಅರ್ಜಿದಾರರು ತಾವು ಬೌದ್ಧ ಧರ್ಮಕ್ಕೆ ಮತಾಂತರಗೊಂಡಿದ್ದೇವೆಂದು ಹೇಳಿಕೊಂಡು, ಬೌದ್ಧ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರು ಎಂದು ಉಪವಿಭಾಗಾಧಿಕಾರಿ ನೀಡಿದ ಪ್ರಮಾಣಪತ್ರಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು.

ಅರ್ಜಿದಾರರು 'ಪುನಿಯಾ' ಜಾತಿಗೆ ಸೇರಿದವರು ಎಂಬುವುದನ್ನು ಗಮನಿಸಿದ ಸಿಜೆಐ ಸೂರ್ಯ ಕಾಂತ್, "ಪುನಿಯಾಗಳು ಪರಿಶಿಷ್ಟ ಜಾತಿ ವರ್ಗದಲ್ಲಿ ಇರಬಹುದು, ಪುನಿಯಾಗಳು ಜಾಟ್ ಕೂಡ ಆಗಿರಬಹುದು, ಅದು ಸಾಮಾನ್ಯ ವರ್ಗ. ನೀವು ಯಾವ ಪುನಿಯಾ?" ಎಂದು ಪ್ರಶ್ನಿಸಿದ್ದಾರೆ.

# ಕಸಾಯಿಖಾನೆ, ಮಾಂಸ ಮಾರಾಟ ಬಂದ್

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ವೋದಯ ದಿನದ ಅಂಗವಾಗಿ ಜ. 30ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಮಾಂಸ ಮಾರಾಟ ಮಾಡುವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಗೆ ತಿಳಿಸಿದ್ದಾರೆ.

# ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಆಹ್ವಾನ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಯಳವತ್ತಿ ಗ್ರಾಮದಲ್ಲಿ ಫೆಬ್ರವರಿ 14ರಂದು 2ನೇ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳಲಾಗಿದ್ದು, ಇದಕ್ಕಾಗಿ ಈಗಾಗಲೇ ಗ್ರಾಮಸ್ಥರು ಪೂರ್ವಸಿದ್ಧತೆಗಳಲ್ಲಿ ತೊಡಗಿದ್ದಾರೆ.

ಈ ಹಿನ್ನೆಲೆಯಲ್ಲಿ ಗುರುವಾರ ಗದಗ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರನ್ನು ಭೇಟಿ ಮಾಡಿ ಸಮ್ಮೇಳನಕ್ಕೆ ಆಹ್ವಾನಿಸಿ, ಕಾರ್ಯಕ್ರಮಕ್ಕೆ ಸರಕಾರದ ಮೂಲಗಳಿಂದ ಆರ್ಥಿಕ ಸಹಾಯ ನೀಡಲು ಮನವಿ ಮಾಡಿದರು. ಜಿಲ್ಲಾಧಿಕಾರಿಗಳು ಗ್ರಾಮಸ್ಥರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿ ಈ ಕುರಿತಂತೆ ನಿರ್ಧರಿಸುವದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ರಾಚನಗೌಡ ಅಜ್ಜನಗೌಡ್ರ, ಭಾಪುಗೌಡ ಭರಮಗೌಡ್ರ, ಸುರೇಶ ಭೀರಣ್ಣವರ, ಹಿರಿಯ ಪತ್ರಕರ್ತ ಜಗದೀಶ ಕುಲಕರ್ಣಿ, ಶಿವಣ್ಣ ಗಾಣಿಗೇರ, ಭೂಮರಡ್ಡಿ ಮಲ್ಲರಡ್ಡಿ ಮುಂತಾದವರಿದ್ದರು.

# ಪೋಷಕತ್ವ ಯೋಜನೆಯಡಿ ಮಕ್ಕಳ ಪಾಲನೆಗೆ ಅವಕಾಶ

■ **ವಿಜಯಸಾಕ್ಷಿ ಸುದ್ದಿ, ಗದಗ**

ಬಾಲನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ-2015 ಹಾಗೂ ತಿದ್ದುಪಡಿ ಕಾಯ್ದೆ 2021ರಡಿ ಗದಗ ಜಿಲ್ಲೆಯಲ್ಲಿ ಬಾಲಕರ/ಬಾಲಕಿಯರ ಸರಕಾರಿ ಬಾಲಮಂದಿರ ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಪೋಷಣೆ ಮತ್ತು ರಕ್ಷಣೆ ಅವಶ್ಯಕತೆ ಇರುವ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿವೆ.

ಈ ಸಂಸ್ಥೆಗಳಲ್ಲಿ ಏಕ-ಪೋಷಕ ಅಥವಾ ಅನಾಥ ಕುಟುಂಬ ಪೋಷಣೆಯಿಂದ ವಂಚಿತವಾದ ಮಕ್ಕಳಿದ್ದು ಇಂತಹ ಮಕ್ಕಳಿಗೆ ಬಾಲನ್ಯಾಯ ಕಾಯ್ದೆ-2015 ಸೆಕ್ಷನ್ 44ರನ್ವಯ ಪೋಷಕತ್ವ ಯೋಜನೆಯಡಿ ಪಾಲನೆ ಮತ್ತು ಪೋಷಣೆಗಾಗಿ ಮಕ್ಕಳ ಕಲ್ಯಾಣ ಸಮಿತಿಯಆದೇಶದ ಮೇರೆಗೆ ಮಗುವಿಗೆ ಸಂಬಂಧವಿಲ್ಲದ ಕುಟುಂಬಕ್ಕೆ ತಾತ್ಕಾಲಿಕವಾಗಿ ಅಥವಾ ವಿಸ್ತರಿಸಲ್ಪಟ್ಟ ಅವಧಿಗೆ ಒಂದು ವರ್ಷಕ್ಕೆ ಮೀರದ ಅವಧಿಯವರಿಗೆ ಮಗುವನ್ನು ಪಾಲನೆ ಮಾಡಲು ನೀಡಬಹುದಾಗಿದೆ. ಮಗುವಿನ ಹೊಂದಾಣಿಕೆ ಮೌಲ್ಯಮಾಪನದ ಆಧಾರದ ಮೇರೆಗೆ ಆರೈಕೆ ಮಾಡುತ್ತಿರುವ ಪೋಷಕರಿಗೆ ಮಕ್ಕಳ ಕಲ್ಯಾಣ ಸಮಿತಿಯು 18 ವರ್ಷದ ವಯಸ್ಸಿನವರೆಗೂ ಪೋಷಕತ್ವವನ್ನು ಮುಂದುವರೆಸಬಹುದಾಗಿದೆ.

ಯೋಜನೆಯ ಮೂಲಭೂತ ತತ್ವ ಪ್ರತಿಯೊಂದು ಮಗುವಿಗೂ ಕುಟುಂಬದ ವಾತಾವರಣದಲ್ಲಿ ಬೆಳೆಯುವ ಹಕ್ಕಿದೆ. ಮಕ್ಕಳ ಕಲ್ಯಾಣ ಸಮಿತಿಯಿಂದ ದತ್ತು ಮುಕ್ತ ಆದೇಶ ಘೋಷಿಸಲ್ಪಟ್ಟ ನಂತರ 6 ರಿಂದ 8 ವರ್ಷದೊಳಗಿನ ಮಕ್ಕಳಿಗೆ 02 ವರ್ಷಗಳ ಅವಧಿಯೊಳಗೆ ಒಂದು ಕುಟುಂಬವು ದತ್ತು ಪಡೆಯದೇ ಇದ್ದಲ್ಲಿ ಅಂತಹ ಮಕ್ಕಳನ್ನು ಪೋಷಕತ್ವ ಯೋಜನೆಯಡಿ ತಾತ್ಕಾಲಿಕ ಪಾಲನೆಗಾಗಿ ನಿಯೋಜನೆ ಮಾಡಬಹುದು. ದತ್ತು ಮುಕ್ತ ಆದೇಶ ಪಡೆದ 8-18 ವರ್ಷ ವಯಸ್ಸಿನ ಮಗುವನ್ನು ದತ್ತು ಪೋಷಕರು ಯಾರು ಆಯ್ಕೆ ಮಾಡದಿದ್ದ ಪಕ್ಷದಲ್ಲಿ ಪೋಷಕತ್ವ ಯೋಜನೆಯಡಿ ನೀಡಬಹುದಾಗಿದೆ. ದತ್ತು ಮುಕ್ತ ಆದೇಶ ಪಡೆದ ಯಾವುದೇ ವಯಸ್ಸಿನ ವಿಶೇಷ ಅಗತ್ಯತೆಯುಳ್ಳ ಮಗು ಒಂದು ವರ್ಷದ ಅವಧಿಯಲ್ಲಿ ಸ್ವದೇಶಿ ಅಥವಾ ವಿದೇಶಿ ದತ್ತು ಪೋಷಕರು ದತ್ತು ಪಡೆಯದೇ ಇದ್ದ ಪಕ್ಷದಲ್ಲಿ ಪೋಷಕತ್ವಯೋಜನೆಯಡಿ ನೀಡಬಹುದಾಗಿದೆ.

ಮಗುವನ್ನು ನೋಡಿಕೊಳ್ಳುವ ಪೋಷಕತ್ವ ಕುಟುಂಬದ ಜವಾಬ್ದಾರಿ ಮಗುವಿಗೆ ಸಾಕಷ್ಟು ಆಹಾರ, ಬಟ್ಟೆ, ವಸತಿ ಮತ್ತು ಶಿಕ್ಷಣವನ್ನು ನೀಡಬೇಕು. ಮಗುವಿಗೆ ಸಮಗ್ರವಾದ ದೈಹಿಕ, ಭಾವನಾತ್ಮಕ ಹಾಗೂ ಮಾನಸಿಕ ಆರೋಗ್ಯಕ್ಕಾಗಿ ರಕ್ಷಣೆ ಸಹಕಾರ ಹಾಗೂ ಚಿಕಿತ್ಸೆಯನ್ನು ಒದಗಿಸಬೇಕು. ವಯಸ್ಸಿಗನುಗುಣವಾಗಿ ವೃತ್ತಿಪರ ತರಬೇತಿ ನೀಡುವುದು ಮಗುವಿನ ಬೆಳವಣಿಗೆಯ ಹಿತಾಸಕ್ತಿಗನುಗುಣವಾಗಿ ಅಗತ್ಯತೆಗಳನ್ನು ಒದಗಿಸುವುದು.

ತಾತ್ಕಾಲಿಕವಾಗಿ ತಮ್ಮ ಕುಟುಂಬದಲ್ಲಿ ಪಾಲನೆ ಹಾಗೂ ರಕ್ಷಣೆ ಜೊತೆಗೆ ಪೋಷಕರಂತೆ ಕೌಟುಂಬಿಕ ವಾತಾವರಣ ಕಲ್ಪಿಸಲು ಇಚ್ಛಿಸುವ ಕುಟುಂಬ /ಸಂಸ್ಥೆ, ಪೋಷಕತ್ವ/ ಗುಂಪು ಪೋಷಕತ್ವಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಗದಗ, ಇವರ ಕಾರ್ಯಾಲಯ ಜಿಲ್ಲಾಡಳಿತ ಭವನ, ಎರಡನೇ ಮಹಡಿ ರೂ ನಂ-225, ಗದಗ ಇವರ ಕಚೇರಿಯಲ್ಲಿ ನಿಗದಿತ ನಮೂನೆ ಅರ್ಜಿ ಪಡೆದು ಹೆಸರು ನೋಂದಾಯಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮಕ್ಕಳ ಕಲ್ಯಾಣ ಸಮಿತಿ ದೂರವಾಣಿ ಸಂಖ್ಯೆ: 08372-246344, ಜಿಲ್ಲಾ ಮಕ್ಕಳ ರಕ್ಷಣಾ ಇಲಾಖೆ, ಗದಗ ದೂರವಾಣಿ ಸಂಖ್ಯೆ: 08372-250758 ಮತ್ತು ಮಕ್ಕಳ ಸಹಾಯವಾಣಿ ಉಚಿತ ಕರೆ 1098ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಶ್ರೀಮತಿ ರಫೀಕಾ ಎ ಹಳ್ಳೂರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದೂ ಸಮಾಜೋತ್ಸವ, ಶೋಭಾಯಾತ್ರೆ ನಾಳೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ಸಮಾಜೋತ್ಸವ ಸರ್ವ ಸಮಾಜದವರು ಸೇರಿ ನಡೆಸುವ ಕಾರ್ಯಕ್ರಮವಾಗಿದ್ದು, ಇದು ಒಂದು ಧಾರ್ಮಿಕ ಉತ್ಸವ ಅಲ್ಲ. ಸಮಾಜದ ಏಕತೆ, ಸಂಸ್ಕೃತಿಯ ಉಳಿವು ಮತ್ತು ಧಾರ್ಮಿಕ ಜಾಗೃತಿಯ ಪ್ರತೀಕವಾಗಿದೆ ಎಂದು ಸಮಿತಿ ಅಧ್ಯಕ್ಷ ಬಸವರಾಜ ಬಿಂಗಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಧಾರ್ಮಿಕ ಭಾವನೆ, ಶಾಂತಿ ಮತ್ತು ಸಹಕಾರವನ್ನು ಬೆಳೆಸುತ್ತವೆ. ಭವ್ಯ ಶೋಭಾಯಾತ್ರೆಯು ಜ. 31ರಂದು ಮಧ್ಯಾಹ್ನ 3 ಗಂಟೆಗೆ ನಗರದ ಶ್ರೀ ವೀರೇಶ್ವರ ಪುಣ್ಯಾಶ್ರಮ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಮಠದಿಂದ ಆರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದೆ ಎಂದರು.




ಶೋಭಾಯಾತ್ರೆಯಲ್ಲಿ ಬೃಹತ್ ಕುಂಭಮೇಳ ನಡೆಯಲಿದ್ದು, ನೂರಾರು ಮಹಿಳೆಯರು ಕುಂಭಮೇಳದಲ್ಲಿ ಭಾಗವಹಿಸಲಿದ್ದಾರೆ. ನಂತರ ವೇದಿಕೆ ಕಾರ್ಯಕ್ರಮ ಅದೇ ದಿನ ಸಾಯಂಕಾಲ 6 ಗಂಟೆಗೆ ಹಾತಲಗೇರಿ ರಸ್ತೆಯ ಮಾಳೇಕೊಪ್ಪಮಠ ಅವರ ಬಯಲು ಜಾಗೆಯ ಶ್ರೀ ಸಾಯಿಬಾಬಾ ದೇವಸ್ಥಾನದ ಹತ್ತಿರ ನಡೆಸಲಾಗುವದು. ದಿಕ್ಸೂಚಿ ಭಾಷಣವನ್ನು ಕೃಷ್ಣಾ ಜೋಷಿ ನಡೆಸಿಕೊಡುವರು. ದಿವ್ಯ ಸಾನ್ನಿಧ್ಯವನ್ನು ವೀರೇಶ್ವರ ಪುಣ್ಯಾಶ್ರಮದ ಪಿಠಾಧಿಪತಿ ಪ.ಪೂ. ಡಾ. ಕಲ್ಲಯ್ಯಜ್ಜನವರು ವಹಿಸಿಕೊಳ್ಳಲಿದ್ದಾರೆ ಎಂದರು.

ಈ ವೇಳೆ ಹಿಂದೂ ಸಮಾಜೋತ್ಸವ ಸಮಿತಿ ಉಪಾಧ್ಯಕ್ಷ ಕೇಶವರಾಮ್ ಕೊಳ್ಳಿ, ಸಂಘಟನಾ ಕಾರ್ಯದರ್ಶಿ ಜಗದೀಶ್ ಎಸ್.ಪಿ, ಚಿನ್ಮಯಾನಂದ ಟೆಂಗಿನಕಾಯಿ, ಶಶಿಧರ ದಿಂಡೂರ, ರಘುನಾಥಸಾ ಮೆರವಾಡೆ, ರಾಜಣ್ಣ ಮಲ್ಲಾಡದ, ಮಂಜುನಾಥ ಕೊಟ್ನೆಕಲ್, ಚಂದ್ರಕಾಂತ ಚವ್ಹಾಣ, ಪ್ರೇಮಾ ಕಡೆಮನಿ, ಕಾರ್ಯದರ್ಶಿ ಪ್ರಕಾಶ ಉಗಲಾಟದ, ಶೈಲೇಶ್ ಬಾಗಮಾರ, ಹರೀಶ ಪೂಜಾರ, ರಾಜಶೇಖರ ಕುಂಬಿ, ನಾಗವೇಣಿ ಕಟ್ಟಿಮನಿ, ಡಾ. ಉಮೇಶ ಹಾದಿ, ಚಿನ್ಮಯಾನಂದ ಟೆಂಗಿನಕಾಯಿ ಮುಂತಾದವರು ಉಪಸ್ಥಿತರಿದ್ದರು.

# ಟೆಕ್ನಾಲಜಿ ಕ್ಲಿನಿಕ್ ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ ಸರ್ಕಾರದ ವಿಶ್ವ ಬ್ಯಾಂಕ್ ನೆರವಿನೊಂದಿಗೆ ಅನುಷ್ಠಾನಗೊಳಿಸಲಾಗುತ್ತಿರುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ (MSME) ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸಲು Raising and Accelerating MSME Performance (RAMP) ಯೋಜನೆಯಡಿಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಗದಗ ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಶನ್ & ಅಡ್ವರ್ಟೈಜಿಂಗ್ ಬೆಂಗಳೂರ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಟೆಕ್ನಾಲಜಿ ಕ್ಲಿನಿಕ್ ಕಾರ್ಯಾಗಾರ ಯಶಸ್ವಿಯಾಯಿತು.

ಕಾರ್ಯಾಗಾರವನ್ನು ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ಸಂತೋಷ ಎಂ.ವಿ ಉದ್ಘಾಟಿಸಿದರು. ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ಚೆನ್ನಬಸವರಾಜ ವುಳ್ಳೂರ ಆಹಾರ ಉತ್ಪನ್ನಗಳ ಸಂಸ್ಕರಣೆ ಕುರಿತಂತೆ ಪಿ.ಪಿ.ಟಿ ಪ್ರೆಸೆಂಟೇಷನ್ ಮೂಲಕ ಉಪನ್ಯಾಸ ನೀಡಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಪಿ.ಬಾರಿಗಿಡದ, ವೈಭವ ಶರಣು ಗದಗ, ಅಜಿತ ನಾಯಕ ಹಾಗೂ ಪ್ರಮುಖ ಉದ್ದಿಮೆದಾರರು ಭಾಗವಹಿಸಿದ್ದರು.

### ಕ್ಲಸ್ಟರ್ ಹಂತದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಉದ್ಘಾಟಿಸಿದ ಡಿಡಿಪಿಐ ಆರ್.ಎಸ್. ಬುರಡಿ

# ಸರ್ಕಾರಿ ಶಾಲೆಗಳ ಬಲವರ್ಧನೆಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಎನ್ನುವುದು ಕೇವಲ ಅಂಕ ಗಳಿಕೆಯ ಮಾರ್ಗವಾಗಬಾರದು. ಅದು ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆ ಮತ್ತು ಉಜ್ವಲ ಭವಿಷ್ಯಕ್ಕೆ ಭದ್ರ ಬುನಾದಿಯಾಗಬೇಕು ಎಂದು ಡಿಡಿಪಿಐ ಆರ್.ಎಸ್. ಬುರಡಿ ಹೇಳಿದರು.

ಅವರು ಗುರುವಾರ ಅಕ್ಕಿಗುಂದ ತಾಂಡಾದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಪ್ರಸಕ್ತ ಸಾಲಿನ ಕ್ಲಸ್ಟರ್ ಹಂತದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿಕ್ಷಕರು ಕೇವಲ ಪಠ್ಯಕ್ಕೆ ಸೀಮಿತವಾಗದೆ, ಪರಿಸರ ಪ್ರಜ್ಞೆ, ಕಲೆ, ಕ್ರೀಡೆ ಮತ್ತು ಮಕ್ಕಳ ಅಭಿರುಚಿಗೆ ತಕ್ಕಂತೆ ಗುಣಾತ್ಮಕ ಶಿಕ್ಷಣ ನೀಡಬೇಕು. ಮಾಡಿ ಕಲಿ–ನೋಡಿ ತಿಳಿ ಎಂಬ ತತ್ವದಡಿ ಮಕ್ಕಳು ಕ್ರಿಯಾತ್ಮಕ ಚಟುವಟಿಕೆಗಳ ಮೂಲಕ ಕಲಿಯುವುದರಿಂದ ಕಲಿಕೆ ಪರಿಣಾಮಕಾರಿಯಾಗುತ್ತದೆ. ಕಲಿಕಾ ಹಬ್ಬ ಮಕ್ಕಳಲ್ಲಿ ಭಾಷೆ, ಅಕ್ಷರ, ಅರಿವಿನ ಜ್ಞಾನ, ಮೌಲ್ಯಗಳನ್ನು ಹೆಚ್ಚಿಸುವಲ್ಲಿ ಸಹಾಯಕವಾಗಿದೆ. ಸರ್ಕಾರಿ ಶಾಲೆಗಳಲ್ಲಿ ಮಗುವಿನ ಅಗತ್ಯಕ್ಕೆ ತಕ್ಕಂತೆ ಉತ್ತಮ ಶಿಕ್ಷಕರಿಂದ ಗುಣಾತ್ಮಕ ಶಿಕ್ಷಣ ಮತ್ತು ಉಚಿತ ಸವಲತ್ತುಗಳು ದೊರೆಯುತ್ತಿವೆ. ಸರ್ಕಾರಿ ಶಾಲೆಗಳ ಬಲವರ್ಧನೆಗೆ ಶಿಕ್ಷಕರು ಮತ್ತು ಪೋಷಕರು ಕೈಜೋಡಿಸಬೇಕು ಎಂದರು.



ಸಮೂಹ ಸಂಪನ್ಮೂಲ ಶಿಕ್ಷಕ ನವೀನ ಅಂಗಡಿ ಮಾತನಾಡಿ, ಕಲಿಕಾ ಹಬ್ಬದ ಮೂಲ ಉದ್ದೇಶ ಮತ್ತು ಕಲಿಕೆಯಲ್ಲಿ ಅದರ ಮಹತ್ವವನ್ನು ವಿವರಿಸಿದರು.

ಈ ವೇಳೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಗುರು ಹವಳದ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ.ಎಸ್. ಹರ್ಲಾಪುರ, ಗ್ರಾ.ಪಂ ಅಧ್ಯಕ್ಷ ಮಂಜುನಾಥ ಛಲವಾದಿ, ಮಹಾಂತಗೌಡ ಪಾಟೀಲ, ಎಸ್‌ಡಿಎಂಸಿ ಅಧ್ಯಕ್ಷ ಪರಮೇಶಪ್ಪ ಲಮಾಣಿ, ಭಾರತಿ ಚೌಡಾಪುರ, ಚಿನ್ನಕ್ಕ ಲಮಾಣಿ, ಮಹಾಂತೇಶ ಹರಿಜನ, ಗಂಗಾಧರ ಕರಿಲಿಂಗಣ್ಣನವರ, ಮಲ್ಲೇಶಪ್ಪ ಲಮಾಣಿ, ಈಶ್ವರ ಮೆಡ್ಲೇರಿ, ಎಂ.ಎ. ನದಾಫ್, ಎಂ.ಡಿ. ವಾರದ, ಬಿ.ಎಂ. ಯರಗುಪ್ಪಿ, ಚಂದ್ರಕಾಂತ ನೇಕಾರ, ಡಿ.ಡಿ. ಲಮಾಣಿ, ಬಿ.ಎಸ್. ಭಜಂತ್ರಿ, ರಾಘವೇಂದ್ರ ಜೋಶಿ, ಮುಖ್ಯ ಶಿಕ್ಷಕ ಬಿ.ಹೆಚ್. ನಡುವಿನಮನಿ ಸೇರಿದಂತೆ ಗ್ರಾ.ಪಂ, ಎಸ್‌ಡಿಎಂಸಿ ಸರ್ವ ಸದಸ್ಯರು, ಹಿರಿಯರು, ಸಿಆರ್‌ಪಿ, ಬಿಆರ್‌ಪಿಗಳು, ಶಿಕ್ಷಕ ವೃಂದದವರು ಪಾಲ್ಗೊಂಡಿದ್ದರು.

ಬಸವರಾಜ ಪೂಜಾರ, ಶಿವರಾಜ ಪಾಟೀಲ, ಅಶೋಕ ಸರ್ವಿ ನಿರೂಪಿಸಿದರು. ಕಲಿಕಾ ಹಬ್ಬದಲ್ಲಿ ವಿವಿಧ ಶಾಲೆಗಳ ನೂರಾರು ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪೋಷಕರು ಉತ್ಸಾಹದಿಂದ ಭಾಗವಹಿಸಿದ್ದರು.

> ಬಿಇಓ ಹೆಚ್ ನಾಣಕಿ ನಾಯ್ಕ ಮಾತನಾಡಿ, ಮಕ್ಕಳು, ಶಿಕ್ಷಕರ ಜೊತೆಗೆ ಪೋಷಕರು ಹಾಗೂ ಸಮುದಾಯವನ್ನೊಳಗೊಂಡು ಸಂತಸದ ಕಲಿಕಾ ವಾತಾವರಣ ಸೃಷ್ಟಿಸಲು ಕಲಿಕಾ ಹಬ್ಬ ಸಹಕಾರಿಯಾಗಿದೆ. ವಿದ್ಯಾರ್ಥಿಗಳು, ತಮ್ಮೊಳಗಿರುವ ಪ್ರತಿಭೆ, ಉತ್ತಮ ಅಭ್ಯಾಸಗಳನ್ನು ಪರಸ್ಪರ ಹಂಚಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ ಎಂದು ಹೇಳಿದರು.

# ಹಿಂದೂ ಸಮ್ಮೇಳನದ ಯಶಸ್ವಿಗೆ ಸಿದ್ಧತೆ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಹೋಬಳಿ ಮಟ್ಟದ ವ್ಯಾಪ್ತಿಯ 28 ಗ್ರಾಮೀಣ ಪ್ರದೇಶಗಳು ಹಾಗೂ ಶಿರಹಟ್ಟಿ ಪಟ್ಟಣವೂ ಸೇರಿದಂತೆ ಅಪಾರ ಹಿಂದೂ ಕಾರ್ಯಕರ್ತರ ಬೃಹತ್ ಶೋಭಾಯಾತ್ರೆಯೊಂದಿಗೆ ಜ.31ರಂದು ಜರುಗಲಿರುವ ಹಿಂದೂ ಸಮ್ಮೇಳನದ ಯಶಸ್ವಿಗೆ ಸಕಲ ಸಿದ್ಧತೆಯನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಸಮ್ಮೇಳನ ಸಮಿತಿ ಮುಖಂಡ ನಾಗರಾಜ ಲಕ್ಕುಂಡಿ ಹೇಳಿದರು.

ಅವರು ಗುರುವಾರ ಶಿರಹಟ್ಟಿಯ ಶಿಕ್ಷಕರ ಭವನದಲ್ಲಿ ಹಿಂದೂ ಸಮ್ಮೇಳನದ ಕುರಿತು ಕರೆದಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಜ.31ರಂದು ಶ್ರೀ ಅಂಬಾಭವಾನಿ ದೇವಸ್ಥಾನದಿಂದ ಬೃಹತ್ ಶೋಭಾಯಾತ್ರೆಯು ಪ್ರಮುಖ ವೃತ್ತಗಳಲ್ಲಿ ಸಂಚರಿಸಲಿದ್ದು, ಮೆರವಣಿಗೆ ಸಾಗುವ ಮಾರ್ಗದಲ್ಲಿ ತೋರಣ, ರಂಗೋಲಿಯಿಂದ ರಸ್ತೆಯನ್ನು ಅಲಂಕೃತಗೊಳಿಸಲು ವ್ಯವಸ್ಥೆ ಮಾಡಲಾಗಿದೆ. ಜೊತೆ–ಗೆ ವಿವಿಧ ಕಲಾ ತಂಡಗಳು ಭಾಗವಹಿಸಲಿವೆ. ಸಂಜೆ 5 ಗಂಟೆಗೆ ಸಿಸಿಎನ್ ಆಂಗ್ಲ ಶಾಲೆ ಆವರಣದಲ್ಲಿ ಸಾರ್ವಜನಿಕ ಸಮಾರಂಭ ನಡೆಯಲಿದೆ. ಇದರ ಸಾನ್ನಿಧ್ಯವನ್ನು ಸೊರಟೂರಿನ ಶಿವಯೋಗೇಶ್ವರ ಸ್ವಾಮೀಜಿ, ನೇತೃತ್ವವನ್ನು ವರವಿಯ ಮೌನೇಶ್ವರ ಸ್ವಾಮೀಜಿ ವಹಿಸಲಿದ್ದು, ಮುಖ್ಯ ಭಾಷಣವನ್ನು ವಿ.ಹಿಂ.ಪ ಕರ್ನಾಟಕ ಉತ್ತರ ಪ್ರಾಂತ್ಯದ ಉಪಾಧ್ಯಕ್ಷ ಗೋವರ್ಧನರಾವ್ ಮಾಡಲಿದ್ದಾರೆ ಎಂದರು.

ಸಮಿತಿಯ ಅಧ್ಯಕ್ಷ ತಿಪ್ಪಣ್ಣ ಕೊಂಚಿಗೇರಿ, ಕಾರ್ಯದರ್ಶಿ ನಟರಾಜ ರಾನಡೆ ಮಾತನಾಡಿ, ಸಂಘ ಶತಾಬ್ದಿಯ ಸವಿನೆನಪಿನಲ್ಲಿ ನಡೆಯುವ ಸಮ್ಮೇಳನದ ಯಶಸ್ವಿಗೆ ಈಗಾಗಲೇ ಎಲ್ಲ ಸಮಾಜದ ಮುಖಂಡರುಗಳನ್ನು ಸಂಪರ್ಕಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಹಿಂದೂ ಕಾರ್ಯಕರ್ತರು ಭಾಗಿಯಾಗಿ ಸಮ್ಮೇಳನವನ್ನು ಯಶಸ್ವಿಗೊಳಿಸಬೇಕೆಂದು ಹೇಳಿದರು.

ರಾಮಣ್ಣ ಕಮ್ಮಾರ, ಪ್ರವೀಣ ಜೈನ್, ಫಕ್ಕೀರೇಶ ರಟ್ಟಿಹಳ್ಳಿ, ಮಹಾದೇವಪ್ಪ ಹಡಪದ, ನೀಲಪ್ಪ ಚಕ್ರಸಾಲಿ, ಮುತಳಾಬಾಯಿ ಪರಬತ, ಮಾರುತಿ ಓಂಕಾರಿ, ಶ್ರೀನಿವಾಸ ಬಾರಬಾರ, ಯಲ್ಲಪ್ಪ ಇಂಗಳಗಿ ಮುಂತಾದವರು ಉಪಸ್ಥಿತರಿದ್ದರು.

# ಅದ್ದೂರಿಯಾಗಿ ಜರುಗಿದ ರಂಗಪ್ಪಜ್ಜನ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬೆಟಗೇರಿ–ನರಸಾಪೂರ ಮಧ್ಯದಲ್ಲಿರುವ ಪೂಜ್ಯ ರಂಗಾವಧೂತರ ತಪೋ ಭೂಮಿಯಲ್ಲಿ ಪೂಜ್ಯ ವೀರಪ್ಪಜ್ಜ ಹಾಗೂ ಪೂಜ್ಯ ರಂಗಪ್ಪಜ್ಜ ಗುರು ಶಿಷ್ಯರ 97ನೇ ಜೋಡು ರಥೋತ್ಸವ ಜರುಗಿತು. ರಂಗಪ್ಪಜ್ಜನ ಮಠದಲ್ಲಿ ಅಲಂಕೃತವಾದ ಗಡ್ಡಿತೇರು ಪೂಜ್ಯ ವೀರಪ್ಪಜ್ಜನ ರಥ ಸಿದ್ಧಪಡಿಸಲಾಗಿತ್ತು. ಬೆಟಗೇರಿ ಮಂಜುನಾಥ ನಗರದ ನಾಗಲಿಂಗೇಶ್ವರ ಯುವಕ ಮಂಡಳ ಹಾಗೂ ಶಿವಾಜಿ ನಗರದ ವಿನಾಯಕ ಗೆಳೆಯರ ಬಳಗದವರು ಬೃಹತ್ ಗಾತ್ರದ ಹೂಮಾಲೆ ಅರ್ಪಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಗಣೇಶಸಿಂಗ್ ಬ್ಯಾಳಿ, ಅಮರೇಶ ಚ್ಯಾಗಿ, ನಿಂಗಪ್ಪ ಚೇಗೂರ, ಮೈಲಾರಪ್ಪ ಅರಣಿ, ರುದ್ರಪ್ಪ ಬಾದರದಿನ್ನಿ, ಭೋಜಪ್ಪ ಹೆಗ್ಗಡಿ, ಮಹದೇಹಸಾ ಮೇರವಾಡೆ, ಹೇಮಂತಗೌಡ ಬೆನಹಾಳ, ರಾಜು ಕಟಗಿ, ಮಲ್ಲೇಶಪ್ಪ ಐಲಿ, ವಿಜಯ ಕಬಾಡಿ, ದುರ್ಗಾಸಿಂಗ್ ಕಾಟೇವಾಲ, ರಂಗಪ್ಪ ದ್ಯಾವಣಸಿ, ನಗರಸಭಾ ಸದಸ್ಯರಾದ ರಾಘವೇಂದ್ರ ಯಳವತ್ತಿ, ಶಕುಂತಲಾ ಅಕ್ಕಿ ಸೇರಿದಂತೆ ನೂರಾರು ಸಾಧು ಸಂತರು ಸೇರಿದಂತೆ ಸಾವಿರಾರು ಸದ್ಭಕ್ತರು ಪಾಲ್ಗೊಂಡಿದ್ದರು.



ರಂಗಾವಧೂತರ ತಪೋಭೂಮಿಯಲ್ಲಿ ನಡೆದ ಜೋಡು ರಥೋತ್ಸವಕ್ಕೆ ಸಹಕರಿಸಿದ ಸಮಸ್ತ ಸದ್ಭಕ್ತರಿಗೆ, ದಾನಿಗಳಿಗೆ, ಗದಗ–ಬೆಟಗೇರಿ ನಗರಸಭೆ, ಹಾತಲಗೇರಿ, ಗ್ರಾಮ ಪಂಚಾಯಿತಿ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಸೇರಿದಂತೆ ಒಂದು ವಾರದಿಂದ ಜರುಗಿದ ಪ್ರಸಾದವನ್ನು ಸ್ವಯಂ ಪ್ರೇರಣೆಯಿಂಧ ಸಿದ್ಧಗೊಳಿಸಿದ್ದ ಚಿದಾನಂದ ಖಾಕಿ ಅವರುಗಳಿಗೆ ಟ್ರಸ್ಟ್ ಕಾರ್ಯದರ್ಶಿ ಗಣೇಶಸಿಂಗ್ ಬ್ಯಾಳಿ ಅಭಿನಂದಿಸಿದ್ದಾರೆ.

# ವಿಜ್ಞಾನ ವಸ್ತು ಪ್ರದರ್ಶನ ವಿಜೇತರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಇತ್ತೀಚೆಗೆ ತೆಲಂಗಾಣ ರಾಜ್ಯದ ಹೈದರಾಬಾದ್‌ನಲ್ಲಿ ಜರುಗಿದ ದಕ್ಷಿಣ ಭಾರತ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ಭಾಗವಹಿಸಿ ವಿಜೇತರಾಗುವ ಮೂಲಕ ಧಾರವಾಡ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿರುವ ವಿದ್ಯಾರ್ಥಿ ಹಾಗೂ ಮಾರ್ಗದರ್ಶಿ ಶಿಕ್ಷಕರುಗಳನ್ನು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪರವಾಗಿ ಉಪನಿರ್ದೇಶಕರು (ಅಭಿವೃದ್ಧಿ) ಹಾಗೂ ಡಯಟ್ ಪ್ರಾಚಾರ್ಯ ಬಸವರಾಜ ನಾಲತವಾಡ ಸನ್ಮಾನಿಸಿದರು.

ಉಪನಿರ್ದೇಶಕರು(ಆಡಳಿತ) ಎಸ್.ಎಸ್. ಕೆಳದಿಮಠ, ಡಿವೈಪಿಸಿ ಎಸ್.ಎಂ. ಹುಡೇದಮನಿ, ಧಾರವಾಡ (ಗ್ರಾ) ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಟಿಸಿಡಬ್ಲ್ಯು ಪ್ರಾಚಾರ್ಯ ರವಿಕುಮಾರ ಬಾರಾಟಕ್ಕೆ, ಡಯಟ್ ಹಿರಿಯ ಉಪನ್ಯಾಸಕ ದೀಪಕ ಕುಲಕರ್ಣಿ ಹಾಜರಿದ್ದರು.

ಹುಬ್ಬಳ್ಳಿ ತಾಲೂಕಿನ ಶ್ರೀ ಎಸ್.ಆರ್.ಬೊಮ್ಮಾಯಿ ಸರಕಾರಿ ಪ್ರೌಢಶಾಲೆ ಗುಂಪು ವಿಭಾಗದಲ್ಲಿ ಆಟೋಮೆಟಿಕ್ ಇಂಜಿನ್ ಲಾಕ್ ಸಿಸ್ಟಮ್ ವಿಷಯದಲ್ಲಿ 9ನೇ ತರಗತಿ ವಿದ್ಯಾರ್ಥಿಗಳಾದ ಶಂಕರ್ ಹೂಗಾರ್ ಮತ್ತು ನವೀನ್ ನಾಯಕ್ ಇವರು ವಿಜೇತರಾಗಿದ್ದಾರೆ. ಇವರಿಗೆ ಎಸ್.ಬಿ. ಭಾವಿಕಟ್ಟಿ ಶಿಕ್ಷಕರು ಮಾರ್ಗದರ್ಶನ ಮಾಡಿದ್ದರು. ಈ ಶಾಲೆಯ ವಿದ್ಯಾರ್ಥಿಗಳು ಕರ್ನಾಟಕ ಸೈನ್ಸ್ ಮತ್ತು ಟೆಕ್ನಾಲಜಿ



ಪ್ರಮೋಷನ್ ಸೊಸೈಟಿ ಬೆಂಗಳೂರು ಇವರ ವತಿಯಿಂದ ವಿಶೇಷ ಬಹುಮಾನವನ್ನು ಪಡೆದಿದ್ದಾರೆ.

ಧಾರವಾಡದ ಪ್ರೆಸೆಂಟೇಷನ್ ಬಾಲಕಿಯರ ಪ್ರೌಢಶಾಲೆಯ ವೈಯಕ್ತಿಕ ವಿಭಾಗದಲ್ಲಿ ಸೆನ್ಸರ್ ಲೈಟ್‌ಹೌಸ್ ವಿಷಯದಲ್ಲಿ 9ನೇ ತರಗತಿಯ ಆಫಶೀನ್ ರಾಹುತ್ ಕರ್ನಾಟಕ ರಾಜ್ಯದ ವಿಭಾಗದಲ್ಲಿ ಪ್ರಥಮ ಬಹುಮಾನವನ್ನು ಪಡೆದಿದ್ದಾರೆ. ಶಾಲೆಯ ಶಿಕ್ಷಕಿ ಸವಿತಾ ಶಿಗಾವಿ ಮಾರ್ಗದರ್ಶನ ಮಾಡಿದ್ದರು.

# 'ನಿರಂತರ ಪ್ರಕಾಶನ'ಕ್ಕೆ ರಾಜ್ಯಮಟ್ಟದ ಪ್ರಕಾಶಕ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಎರಡೂವರೆ ದಶಕಗಳಿಂದ ಪುಸ್ತಕ ಪ್ರಕಾಶನ ಕ್ಷೇತ್ರದಲ್ಲಿ ತನ್ನದೇ ಆದ ಹಿರಿಮೆ ಗಳಿಸಿ ಮೌಲಿಕ ಕೃತಿಗಳನ್ನು ಕನ್ನಡ ಸಾರಸ್ವತ ಲೋಕಕ್ಕೆ ಅರ್ಪಿಸಿ, ಅಕ್ಷರ ಸಂಸ್ಕೃತಿ ಉಳಿಸಿ, ಪುಸ್ತಕ ಸಂಸ್ಕೃತಿ ಬೆಳೆಸಲು ಪಣ ತೊಟ್ಟಿರುವ ಸ್ಥಳೀಯ ನಿರಂತರ ಪ್ರಕಾಶನದ ಪ್ರಕಾಶಕ, ಹಿರಿಯ ಸಾಹಿತಿ ಎ.ಎಸ್. ಮಕಾನದಾರ ಅವರು ರಾಜ್ಯಮಟ್ಟದ ಪ್ರಕಾಶನ ಪ್ರಶಸ್ತಿಗೆ ಭಾಜನರಾಗಿದ್ದಾರೆ

ಫೆಬ್ರವರಿ 7 ಮತ್ತು 8ರಂದು ಬೀದರ್ ಜಿಲ್ಲೆಯ ಬೇಲೂರಿನ ಶರಣ ಉರಿಲಿಂಗ ಪೆದ್ದಿ, ಶರಣೆ ಕಾಳವ್ವೆ ಉತ್ಸವ, ಲಿಂಗೈಕ್ಯ ಶಿವಲಿಂಗೇಶ್ವರ ಶಿವಯೋಗಿಗಳ 57ನೇ ಪುಣ್ಯ ಸ್ಮರಣೆ ನಿಮಿತ್ತ ಉರಿಲಿಂಗ ಪೆದ್ದಿ ಮಠದಲ್ಲಿ ಕರ್ನಾಟಕ ರಾಜ್ಯ ಮಟ್ಟದ ಪ್ರಥಮ ಪ್ರಕಾಶಕರ ಸಮ್ಮೇಳನದಲ್ಲಿ ಸಮಗ್ರ ಯೋಜನೆ ಶಿಕ್ಷಣ ಇಲಾಖೆಯ ನಿರ್ದೇಶಕ ಡಾ. ಸತೀಶ್ ಹೊಸಮನಿಯವರು ಪ್ರಶಸ್ತಿ ಪ್ರದಾನ ಮಾಡುವರು.

ಪುಸ್ತಕೋದ್ಯಮಿ ಬಸವರಾಜ್



ಜಿ.ಕೊನೆಕ್ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಲಿದ್ದಾರೆ. ಶಾಸಕ ಶರಣು ಸಲಗರ ಸಮಾರಂಭದ ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಪುಸ್ತಕ ವ್ಯಾಪಾರಿ ಮತ್ತು ಪ್ರಕಾಶಕರ ಸಂಘದ ಜಿಯಾ ಉದ್ದಿತ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಉರಿಲಿಂಗಪೆದ್ದಿ ಸಂಸ್ಥಾನ ಮಠದ ಜ್ಞಾನ ಪ್ರಕಾಶ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಖ್ಯಾತ ಕವಿ ಡಾ. ರಾಜಶೇಖರ್ ಮಠಪತಿ ಸಮಾರೋಪ ನುಡಿಗಳನ್ನಾಡುವರು.

ಇದೇ ಸಂದರ್ಭದಲ್ಲಿ ನಿರಂತರ ಪ್ರಕಾಶನದ ಜೊತೆಗೆ ವಿದ್ಯಾನಿಧಿ ಪ್ರಕಾಶನ, ಅಭಿನವ ಪ್ರಕಾಶನ, ಶಾರದಾ ಪ್ರಕಾಶನ, ಅಮರ ಪ್ರಕಾಶನ ಶಿರಪುರ ಪ್ರಕಾಶನ, ಧರಿನಾಡು ಪ್ರಕಾಶನ, ಪೂಜಾ ಪ್ರಕಾಶನ ಸಂಸ್ಥೆಗಳ ಪ್ರಕಾಶಕರೂ ಪ್ರಕಾಶನ ಪ್ರಶಸ್ತಿ ಸ್ವೀಕರಿಸಲಿದ್ದಾರೆ.

# ಸಾರ್ವಜನಿಕ ಕಾರ್ಯಕ್ರಮದಲ್ಲಿ ವೃದ್ಧ ಮಹಿಳೆಯನ್ನು ಕಾಲಿನಿಂದ ಒದ್ದ ವ್ಯಕ್ತಿ

■ವಿಜಯಸಾಕ್ಷಿ ಸುದ್ದಿ, ರಾಜಸ್ಥಾನ

ರಾಜಸ್ಥಾನದ ಬಾರ್ಮರ್ ಜಿಲ್ಲೆಯಲ್ಲಿ ನಡೆಯುತ್ತಿದ್ದ ಸಾರ್ವಜನಿಕ ಕಾರ್ಯಕ್ರಮವೊಂದರಲ್ಲಿ ವೃದ್ಧ ಮಹಿಳೆಯನ್ನು ಒದೆಯುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ನಂತರ ವ್ಯಕ್ತಿಯನ್ನು ಬಂಧಿಸಲಾಗಿದೆ. ಆತನ ಕೃತ್ಯದ ವಿರುದ್ಧ ವ್ಯಾಪಕ ಆಕ್ರೋಶಕ್ಕೆ ವ್ಯಕ್ತವಾಗಿದೆ.

ಜತೋನ್ ಕಾ ಬೆರಾ ಸರ್ಲಾ ಗ್ರಾಮದ ಬಖಾಸರ್ ಪೊಲೀಸ್ ಠಾಣೆ ಪ್ರದೇಶದಲ್ಲಿ ಈ ಘಟನೆ ನಡೆದಿದ್ದು, ಸ್ಥಳೀಯ ಕಾರ್ಯಕ್ರಮಕ್ಕಾಗಿ ಗ್ರಾಮಸ್ಥರು ಡಿಜೆ ಹಾಕಿದ್ದ ಸ್ಥಳದಲ್ಲಿ ಕಾರ್ಯಕ್ರಮಕ್ಕಾಗಿ ಗ್ರಾಮಸ್ಥರು ಸೇರಿದ್ದರು. ಪೊಲೀಸರ ಪ್ರಕಾರ, ವೃದ್ಧ ಮಹಿಳೆ ಸಂಗೀತಕ್ಕೆ ನೃತ್ಯ ಮಾಡುತ್ತಿದ್ದಾಗ ಯುವಕನೊಬ್ಬ ಇದ್ದಕ್ಕಿದ್ದಂತೆ ಹಿಂದಿನಿಂದ ಬಂದು ಆಕೆಯನ್ನು ಒದ್ದಿದ್ದರಿಂದ ಆಕೆ ನೆಲಕ್ಕೆ ಬಿದ್ದಳು. ಈ ಕೃತ್ಯವು ಅಲ್ಲಿದ್ದವರನ್ನು ಬೆಚ್ಚಿಬೀಳಿಸಿತು. ಹಠಾತ್ತನೆ ಇಡೀ ಕಾರ್ಯಕ್ರಮ ನಿಲ್ಲಿಸಬೇಕಾಯಿತು.



ಹಲ್ಲೆಯ ವೀಡಿಯೊ ಆನ್‌ಲೈನ್‌ನಲ್ಲಿ ವ್ಯಾಪಕವಾಗಿ ಪ್ರಸಾರವಾಯಿತು, ಸಾಮಾಜಿಕ ಮಾಧ್ಯಮ ಬಳಕೆದಾರರಿಂದ ತೀವ್ರ ಖಂಡನೆ ವ್ಯಕ್ತವಾಗಿದೆ. ಅವರಲ್ಲಿ ಹಲವರು ಈ ಕೃತ್ಯವನ್ನು ಅಮಾನವೀಯ ಎಂದು ಕರೆದಿದ್ದು, ಕಠಿಣ ಶಿಕ್ಷೆಗೆ ಒತ್ತಾಯಿಸಿದರು.

ಹಲವಾರು ಹೇಳಿಕೆಗಳಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಮಹಿಳೆಯರ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.

ಸಾರ್ವಜನಿಕ ಆಕ್ರೋಶದ ನಂತರ, ಬಖಾಸರ್ ಪೊಲೀಸರು ದೀಪರಾಮ್ ಎಂದು ಗುರುತಿಸಲಾದ ಆರೋಪಿಯನ್ನು ಬಂಧಿಸಿದರು.


**ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372–278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025–26/1320 ದಿನಾಂಕ: 29.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಮಹ್ಮದಜಿಕರಿಯಾ ಮಹ್ಮದಗೌಸ ನರಗುಂದ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 69(3)**ರಂತೆ ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಕಳಸಾಪೂರ | 231/*/4 | 02ಎಕರೆ–28ಗುಂಟೆ 10ಆಣೆ | ವಸತಿ | ವಾಣಿಜ್ಯ (ಮಳಿಗೆ) |

ಸಹಿ/– ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ

ವಾ.ಸಾ.ಇ/ಗದಗ/600/ದೇಶಪಾಂಡೆಪಬ್ಲಿಸಿಟಿ/2025–26



**ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372–278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025–26/1318 ದಿನಾಂಕ: 29.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಅಬ್ದುಲ ಅಜೀಜ ಅಬ್ದುಲ ಕರೀಮಸಾಬ ನರಗುಂದ ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 69(3)**ರಂತೆ ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಕಳಸಾಪೂರ | 231/*/2 | 01ಎಕರೆ–31ಗುಂಟೆ 07ಆಣೆ | ವಸತಿ | ವಾಣಿಜ್ಯ (ಮಳಿಗೆ) |

ಸಹಿ/– ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ–ಬೆಟಗೇರಿ

ವಾ.ಸಾ.ಇ/ಗದಗ/595/ದೇಶಪಾಂಡೆಪಬ್ಲಿಸಿಟಿ/2025–26



**ಕರ್ನಾಟಕ ಸರಕಾರ**

**ಗ್ರಾಮ ಪಂಚಾಯತ ಕಾರ್ಯಾಲಯ ಬೆಳವಣಕಿ**

ತಾಲೂಕ : ರೋಣ e-mail : belavanaki.ron.gdg@gmail.com ಜಿಲ್ಲಾ : ಗದಗ

ನಂ: ಗ್ರಾ.ಪಂ./ಬೆಳವಣಕಿ/ ಟೆಂಡರ/2025–26/10 ದಿನಾಂಕ: 29/01/2026

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ (ದ್ವಿ–ಲಕೋಟಿ)–2ನೆ ಕರೆ**

ಉಲ್ಲೇಖ:– ಗ್ರಾ.ಪಂ./ಬೆಳವಣಕಿ/ ಟೆಂಡರ/2025–26/09 ದಿನಾಂಕ: 05–1–2026

ಈ ಕಛೇರಿಯಿಂದ ಉಲ್ಲೇಖದಂತೆ ಟೆಂಡರನ್ನು ಆಹ್ವಾನಿಸಲಾಗಿತ್ತು. ಸದರಿ ಟೆಂಡರಿನಲ್ಲಿ ಯಾರು ಭಾಗವಹಿಸದೇ ಇದ್ದ ಕಾರಣ ಸದರಿ ಕಾಮಗಾರಿಗಳಿಗೆ ಮರುಟೆಂಡರ ಆಹ್ವಾನಿಸಲಾಗಿದೆ. ಷರತ್ತಿನಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಗುತ್ತಿಗೆದಾರ/ ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ್ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

**I.No.13030/CALL-2, I.No.13031/CALL-2**

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ ಸಂಬಂದಪಟ್ಟ ವರ್ಕ್ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕೆಪಿಪಿ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್–ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ:–30–01–2026 ರಿಂದ 07–02–2026 ರಂದು 16.00 ಗಂಟೆಯವರೆಗೆ. ತಾಂತ್ರಿಕ ಬಿಡ್ ಟೆಂಡರ ತೆರೆಯುವ ದಿನಾಂಕ: 09–02–2026 ರಂದು 16.30 ಗಂಟೆಗೆ ಆರ್ಥಿಕ ಬಿಡ್ ದಿ: 11–02–2026 ರಂದು 11.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ –
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು,**
ಗ್ರಾಮ ಪಂಚಾಯತ ಬೆಳವಣಕಿ
ತಾಲೂಕ: ರೋಣ, ಜಿಲ್ಲಾ : ಗದಗ.


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka